ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 117 Friday **23-10-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 117 ಶುಕ್ರವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ರಸ್ತೆ ಅಭಿವೃದ್ಧಿಗೆ ಕೋಟಿಗೂ ಅಧಿಕ ಅನುದಾನ; ಕಾಮಗಾರಿ ಗುಣಮಟ್ಟಕ್ಕೆ ಮಾತ್ರ ಗ್ರಹಣ!

ಅಗಸನಹಳ್ಳಿ ಗೇಟ್–ಬಸವನಕೋಟೆ ರಸ್ತೆ ಅಭಿವೃದ್ಧಿ ಕಾಮಗಾರಿಯ ಗುಣಮಟ್ಟದ ಬಗ್ಗೆ ಗ್ರಾಮಸ್ಥರ ಆಕ್ರೋಶ

“ಮುಂಜಾನೆಯ ಮೆರಗು”

ಜಗಳೂರು ಅ, 22– ರಸ್ತೆ ಅಭಿವೃದ್ಧಿ ಕಾಮಗಾರಿ ಪೂರ್ಣಗೊಳ್ಳುವ ಮುನ್ನವೇ ರಸ್ತೆಯ ಕೆಲ ಭಾಗಗಳಲ್ಲಿ ಡಾಂಬರು ಕಿತ್ತುಹೋಗುತ್ತಿರುವುದು ಕಾಮಗಾರಿಯ ಗುಣಮಟ್ಟದ ಬಗ್ಗೆ ಹಲವು ಅನುಮಾನಗಳಿಗೆ ಕಾರಣವಾಗಿದ್ದು, ವಾಹನ ಸವಾರರು ಹಾಗೂ ಗ್ರಾಮಸ್ಥರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ತಾಲೂಕಿನ ಅಗಸನಹಳ್ಳಿ ಗೇಟ್‌ನಿಂದ ಬಸವನಕೋಟೆ ಗ್ರಾಮದವರೆಗೆ ಲೋಕೋಪಯೋಗಿ ಇಲಾಖೆಯ ವತಿಯಿಂದ ಕೈಗೆತ್ತಿಕೊಳ್ಳಲಾಗಿರುವ ರಸ್ತೆ ಅಭಿವೃದ್ಧಿ ಕಾಮಗಾರಿ ನಿರೀಕ್ಷಿತ ಗುಣಮಟ್ಟದಲ್ಲಿ ನಡೆಯುತ್ತಿಲ್ಲ ಎಂಬ ಆರೋಪ ಕೇಳಿಬಂದಿದೆ. ಸುಮಾರು ಎರಡು ಕಿಲೋಮೀಟರ್‌ಗೂ ಹೆಚ್ಚು ಉದ್ದದ ಈ ರಸ್ತೆ ಕಾಮಗಾರಿಗೆ 2025–26ನೇ ಸಾಲಿನ ರಾಜ್ಯ ಆಯವ್ಯಯ ಯೋಜನೆಯಡಿ ಒಂದು ಕೋಟಿಗೂ ಅಧಿಕ ಅನುದಾನ ಒದಗಿಸಲಾಗಿದೆ ಎಂದು ತಿಳಿದುಬಂದಿದೆ.

ಈ ಹಿಂದೆ ಅಗಸನಹಳ್ಳಿ ಗೇಟ್‌ನಿಂದ ಬಸವನಕೋಟೆ ಗ್ರಾಮದವರೆಗಿನ ರಸ್ತೆಯಲ್ಲಿ ಅಲ್ಲಲ್ಲಿ ಗುಂಡಿಗಳು ನಿರ್ಮಾಣವಾಗಿದ್ದವು. ರಸ್ತೆ ಹದಗೆಟ್ಟಿದ್ದರಿಂದ ವಾಹನ ಸವಾರರು ಪ್ರತಿನಿತ್ಯ ಸಂಚಾರಕ್ಕೆ ತೀವ್ರ ತೊಂದರೆ ಅನುಭವಿಸುತ್ತಿದ್ದರು. ಸಾರ್ವಜನಿಕರ ಸಮಸ್ಯೆಯನ್ನು ಗಮನಿಸಿದ ಶಾಸಕ ಬಿ. ದೇವೇಂದ್ರಪ್ಪ ಅವರು ರಸ್ತೆ ಅಭಿವೃದ್ಧಿಗೆ ಒತ್ತು ನೀಡಿದ್ದರು. ಇದರಿಂದಾಗಿ ಸುಗಮ ಸಂಚಾರಕ್ಕೆ ಅನುಕೂಲವಾಗಲಿದೆ ಎಂಬ



ನಿರೀಕ್ಷೆ ಗ್ರಾಮಸ್ಥರಲ್ಲಿ ಮೂಡಿತ್ತು.

ಆದರೆ, ರಸ್ತೆ ಅಭಿವೃದ್ಧಿ ಕಾಮಗಾರಿ ಆರಂಭವಾಗಿ ನಿರೀಕ್ಷಿತ ರೀತಿಯಲ್ಲಿ ಪೂರ್ಣಗೊಳ್ಳುವ ಮೊದಲೇ ರಸ್ತೆಯ ಕೆಲವು ಭಾಗಗಳಲ್ಲಿ ಡಾಂಬರು ಕಿತ್ತುಬರುತ್ತಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ. ರಸ್ತೆಯ ಒಂದು ಬದಿಯಲ್ಲಿ ಡಾಂಬರೀಕರಣದ ಪದರ ಹಾಕಲಾಗಿದ್ದರೆ, ಮತ್ತೊಂದು ಭಾಗದಲ್ಲಿ ರಸ್ತೆ ಹಾಳಾಗುತ್ತಿರುವುದು ಕಂಡುಬರುತ್ತಿದೆ. ಇದರಿಂದ ಕಾಮಗಾರಿಯ ನಿರ್ವಹಣೆ ಹಾಗೂ ಗುಣಮಟ್ಟದ ಬಗ್ಗೆ ಪ್ರಶ್ನೆಗಳು ಉದ್ಭವಿಸಿವೆ.

ಕಾಮಗಾರಿ ಗುಣಮಟ್ಟದ ಬಗ್ಗೆ ಪ್ರಶ್ನೆ

ಸರ್ಕಾರದ ಅನುದಾನದಲ್ಲಿ ಕೈಗೊಳ್ಳುವ ರಸ್ತೆ ಅಭಿವೃದ್ಧಿ ಕಾಮಗಾರಿಗಳು ದೀರ್ಘಕಾಲ ಬಾಳಿಕೆ ಬರುವಂತಿರಬೇಕು. ಆದರೆ, ಕಾಮಗಾರಿ ಪೂರ್ಣಗೊಳ್ಳುವ ಮುನ್ನವೇ ರಸ್ತೆ ಹಾಳಾಗುತ್ತಿರುವುದು ಕಂಡುಬಂದರೆ ಸಂಬಂಧಪಟ್ಟ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಗುಣಮಟ್ಟವನ್ನು ಖಾತರಿಪಡಿಸಬೇಕಿದೆ ಎಂಬುದು ಸಾರ್ವಜನಿಕರ ಒತ್ತಾಯವಾಗಿದೆ.

ಕಾಮಗಾರಿಯಲ್ಲಿ ಬಳಸಿರುವ ಸಾಮಗ್ರಿಗಳ ಗುಣಮಟ್ಟ, ಡಾಂಬರೀಕರಣದ ವಿಧಾನ ಹಾಗೂ ಕಾಮಗಾರಿಯ ಮೇಲ್ವಿಚಾರಣೆ ಸಮರ್ಪಕವಾಗಿ ನಡೆದಿದೆಯೇ ಎಂಬುದನ್ನು ಪರಿಶೀಲಿಸಬೇಕಾಗಿದೆ. ರಸ್ತೆ ಅಭಿವೃದ್ಧಿಗೆ ಸರ್ಕಾರ ಕೋಟ್ಯಂತರ ರೂಪಾಯಿ ಅನುದಾನ ಒದಗಿಸಿದರೂ, ಕಾಮಗಾರಿ

> **ಮಳೆಗಾಲದಿಂದ ಕಾಮಗಾರಿ ವಿಳಂಬ**
>
> “ರಸ್ತೆ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ಈಗಾಗಲೇ ಸೂಚನೆ ನೀಡಲಾಗಿದೆ. ಸದ್ಯ ಮಳೆಗಾಲ ಇರುವುದರಿಂದ ಕಾಮಗಾರಿ ವಿಳಂಬವಾಗುತ್ತಿದೆ. ಕಾಮಗಾರಿಯನ್ನು ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.”
>
> **–– ಪುರುಷೋತ್ತಮ ರೆಡ್ಡಿ, ಎಇ, ಲೋಕೋಪಯೋಗಿ ಇಲಾಖೆ**

ಕಳಪೆಯಾಗಿದ್ದರೆ ಸಾರ್ವಜನಿಕರ ತೆರಿಗೆ ಹಣ ವ್ಯರ್ಥವಾಗುವ ಆತಂಕವಿದೆ.

ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿಯ ಗುಣಮಟ್ಟ ಪರಿಶೀಲಿಸಬೇಕು. ನಿಯಮಾನುಸಾರ ಕಾಮಗಾರಿ ನಡೆದಿದೆಯೇ ಎಂಬುದನ್ನು ಖಚಿತಪಡಿಸಿಕೊಂಡು, ಲೋಪಗಳು ಕಂಡುಬಂದಲ್ಲಿ ಅವುಗಳನ್ನು ಸರಿಪಡಿಸಲು ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

ದೇವಾಲಯಗಳಿಗೆ ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆ

ಅಗಸನಹಳ್ಳಿ ಗೇಟ್‌ನಿಂದ ಬಸವನಕೋಟೆ ಗ್ರಾಮದವರೆಗಿನ ಈ ರಸ್ತೆ ಧಾರ್ಮಿಕ ಹಾಗೂ ಪ್ರವಾಸಿ ಮಹತ್ವವನ್ನೂ ಹೊಂದಿದೆ. ಅಗಸನಹಳ್ಳಿಯ ಸುಬ್ರಹ್ಮಣ್ಯ ದೇವಾಲಯ, ಚೌಡಮ್ಮ ದೇವಾಲಯ ಹಾಗೂ ಮಡ್ರಳ್ಳಿ ಚೌಡಮ್ಮ ದೇವಿಯ ಸನ್ನಿಧಿಗಳಿಗೆ ತೆರಳುವ ಭಕ್ತರು ಇದೇ ರಸ್ತೆಯನ್ನು ಅವಲಂಬಿಸಿದ್ದಾರೆ.

ಪ್ರತಿನಿತ್ಯ ನೂರಾರು ಭಕ್ತರು



> **ಸಾರ್ವಜನಿಕರ ತೆರಿಗೆ ಹಣ ವ್ಯರ್ಥವಾಗಬಾರದು**
>
> “ಸಾರ್ವಜನಿಕರ ತೆರಿಗೆ ಹಣವನ್ನು ಈ ರೀತಿ ವ್ಯರ್ಥ ಮಾಡುವುದು ಸರಿಯಲ್ಲ. ಸರ್ಕಾರದಿಂದ ಬಿಡುಗಡೆಯಾಗುವ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ಗುಣಮಟ್ಟದ ಕಾಮಗಾರಿ ನಿರ್ವಹಿಸುವುದು ಅಧಿಕಾರಿಗಳ ಕರ್ತವ್ಯವಾಗಿದೆ. ಕಾಮಗಾರಿ ಪೂರ್ಣಗೊಳ್ಳುವ ಮೊದಲೇ ರಸ್ತೆ ಹಾಳಾಗುತ್ತಿದ್ದರೆ ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು.”
>
> **––– ರಾಘವೇಂದ್ರ, ಸಾಮಾಜಿಕ ಹೋರಾಟಗಾರ**

ಹಾಗೂ ವಾಹನ ಸವಾರರು ಈ ಮಾರ್ಗದಲ್ಲಿ ಸಂಚರಿಸುತ್ತಾರೆ. ರಸ್ತೆ ಹದಗೆಟ್ಟಿರುವುದರಿಂದ ವಾಹನಗಳ ಸಂಚಾರಕ್ಕೆ ಅಡಚಣೆಯಾಗುವುದರ ಜೊತೆಗೆ, ದ್ವಿಚಕ್ರ ವಾಹನ ಸವಾರರು ತೊಂದರೆ ಅನುಭವಿಸುವಂತಾಗಿದೆ. ಹಬ್ಬ–ಹರಿದಿನಗಳು ಹಾಗೂ ವಿಶೇಷ ಪೂಜಾ ಸಂದರ್ಭಗಳಲ್ಲಿ ಭಕ್ತರ ವಾಹನಗಳ ಸಂಖ್ಯೆ ಹೆಚ್ಚಾಗುವುದರಿಂದ ಸುಗಮ ಸಂಚಾರಕ್ಕೆ ಉತ್ತಮ ರಸ್ತೆ ಅಗತ್ಯವಾಗಿದೆ.

ಒಟ್ಟಾರೆ, ಸಾರ್ವಜನಿಕರ ಅನುಕೂಲಕ್ಕಾಗಿ ಕೈಗೆತ್ತಿಕೊಳ್ಳಲಾದ ರಸ್ತೆ ಅಭಿವೃದ್ಧಿ ಕಾಮಗಾರಿ ಗುಣಮಟ್ಟದೊಂದಿಗೆ ಪೂರ್ಣಗೊಳ್ಳಬೇಕಿದೆ. ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಮತ್ತು ಗುತ್ತಿಗೆದಾರರು ಕಾಮಗಾರಿಯ ಬಗ್ಗೆ ಹೆಚ್ಚಿನ ಗಮನಹರಿಸಿ, ಹಾಳಾಗಿರುವ ಭಾಗಗಳನ್ನು ಸರಿಪಡಿಸಿ, ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂಬುದು ಗ್ರಾಮಸ್ಥರ ಒತ್ತಾಯವಾಗಿದೆ.

ಪದವೀಧರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಗೆ ಸಕಲ ಸಿದ್ಧತೆ

“ಮುಂಜಾನೆಯ ಮೆರಗು”

ಜಗಳೂರು,ಅ.22– ತಾಲ್ಲೂಕಿನ 4 ಮತಗಟ್ಟೆ ಕೇಂದ್ರಗಳಲ್ಲಿ ಆಗ್ನೇಯ ಪದವೀಧರರ ಕ್ಷೇತ್ರದ ವಿಧಾನಪರಿಷತ್ ಚುನಾವಣೆ ಮತದಾನಕ್ಕೆ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ತಹಶೀಲ್ದಾರ್ ಗುರುಬಸವರಾಜ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ತಾಲ್ಲೂಕಿನಾದ್ಯಂತ 3454 ಮತದಾರರು ನೊಂದಣಿಯಾಗಿದ್ದು, ಪಟ್ಟಣದ ಸರ್ಕಾರಿ ಪದವಿಪೂರ್ವ ಕಾಲೇಜು ಆವರಣದಲ್ಲಿ 2, ಹೊಸಕೆರೆ, ಬಿಳಿಚೋಡು ಗ್ರಾಮಗಳಲ್ಲಿ ತಲಾ 1 ಮತಗಟ್ಟೆಗಳಂತೆ ಒಟ್ಟು 4 ಮತಗಟ್ಟೆ ಕೇಂದ್ರಗಳನ್ನು ತೆರೆಯಲಾಗಿದೆ. ಬೆಳಿಗ್ಗೆ 8 ಗಂಟೆಯಿಂದ ಸಂಜೆ 4ಗಂಟೆವರೆಗೆ ಮತದಾನ ಪ್ರಕ್ರಿಯೆನಡೆಯಲಿದೆ. ನೊಂದಣಿಗೊಂಡ ಪದವೀಧರ ಮತದಾರರು ತಮ್ಮ ಆಧಾರಕಾರ್ಡ್, ಚುನಾವಣೆ ಗುರುತಿನ ಚೀಟಿ, ಕಾರ್ಡ್ ಸೇರಿದಂತೆ ಇತರೆ ಒಟ್ಟು 10ದಾಖಲೆಗಳಲ್ಲಿ ಯಾವುದಾದರೂ ಒಂದು ದಾಖಲಾತಿಯೊಂದಿಗೆ ಮತದಾನ ಚಲಾಯಿಸಲು ತೆರಳಬೇಕು

ಪಿಆರ್‌ಓ, ಎಬಿಆರ್‌ಓ ಸೇರಿದಂತೆ ಚುನಾವಣೆ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ. ಪೋಲೀಸ್ ಬಂದೋಬಸ್ತ್ ನೊಂದಿಗೆ ಶಾಂತಿ, ಸುವ್ಯವಸ್ಥೆ ಕಾಪಾಡಲು ಅಗತ್ಯ ಕ್ರಮವಹಿಸಲಾಗಿದೆ ಎಂದು ತಿಳಿಸಿದ್ದಾರೆ.

ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಬಣವಿಗೆ ಬೆಂಕಿ: ತಪ್ಪಿದ ಭಾರೀ ಅನಾಹುತ

“ಮುಂಜಾನೆಯ ಮೆರಗು”

ಜಗಳೂರು, ಅ.22– ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಬಣವಿಗೆ ಬೆಂಕಿ ತಗುಲಿ ಒಣಮೇವು ಸುಟ್ಟು ಭಸ್ಮವಾಗಿರುವ ಘಟನೆ ತಾಲ್ಲೂಕಿನ ಹನುಮಂತಾಪುರ ಗ್ರಾಮದಲ್ಲಿ ನಡೆದಿದೆ. ಗ್ರಾಮಸ್ಥರು ತಕ್ಷಣ ಕಾರ್ಯಪ್ರವೃತ್ತರಾಗಿ ಬೆಂಕಿ ನಂದಿಸಿದ್ದರಿಂದ ಸಂಭವಿಸಬಹುದಾಗಿದ್ದ ಭಾರೀ ಅನಾಹುತ ತಪ್ಪಿದೆ.

ತಾಲ್ಲೂಕಿನ ಹನುಮಂತಾಪುರ ಗ್ರಾಮದ ಬಸವರಾಜ್ ಎಂಬುವವರಿಗೆ ಸೇರಿದ ಕಣದಲ್ಲಿ ಜಾನುವಾರುಗಳಿಗಾಗಿ ಸಂಗ್ರಹಿಸಿಟ್ಟಿದ್ದ ಒಣಮೇವು ಬೆಂಕಿಗೆ ಆಹುತಿಯಾಗಿದೆ. ವಿದ್ಯುತ್ ತಂತಿಗಳಲ್ಲಿ ಉಂಟಾದ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಕಾಣಿಸಿಕೊಂಡಿರಬಹುದು ಎಂದು ಶಂಕಿಸಲಾಗಿದೆ.

ಬಣವಿಗೆ ಬೆಂಕಿ ತಗುಲಿರುವುದನ್ನು ಗಮನಿಸಿದ ರೈತರು ಹಾಗೂ ಗ್ರಾಮಸ್ಥರು



ತಕ್ಷಣ ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸಲು ಮುಂದಾಗಿದ್ದಾರೆ. ಸಮಯಪ್ರಜ್ಞೆಯಿಂದ ಬೆಂಕಿಯನ್ನು ನಿಯಂತ್ರಣಕ್ಕೆ ತರುವ ಮೂಲಕ ಹೆಚ್ಚಿನ ಪ್ರಮಾಣದ ಮೇವು ಸುಡುವುದನ್ನು ತಡೆದಿದ್ದಾರೆ.

ರೈತರು ಜಾನುವಾರುಗಳಿಗಾಗಿ ವರ್ಷವಿಡೀ ಕಷ್ಟಪಟ್ಟು ಸಂಗ್ರಹಿಸಿಟ್ಟಿರುವ ಒಣಮೇವು ಇಂತಹ ಅಗ್ನಿ ಅವಘಡಗಳಿಂದ ನಷ್ಟವಾಗುತ್ತಿರುವುದು ಆತಂಕಕ್ಕೆ ಕಾರಣವಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಹಾದುಹೋಗಿರುವ ವಿದ್ಯುತ್ ತಂತಿಗಳ ನಿರ್ವಹಣೆಗೆ ಬೆಸ್ಕಾಂ ಇಲಾಖೆ ಹೆಚ್ಚಿನ ಆದ್ಯತೆ ನೀಡಬೇಕು. ಹಾನಿಗೊಳಗಾದ ವಿದ್ಯುತ್ ತಂತಿಗಳನ್ನು ತಕ್ಷಣ ದುರಸ್ತಿಪಡಿಸಿ, ಇಂತಹ ಘಟನೆಗಳು ಮರುಕಳಿಸದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ರೈತರು ಒತ್ತಾಯಿಸಿದ್ದಾರೆ.

ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಬೆಂಕಿಯಿಂದ ಉಂಟಾಗಿರುವ ನಷ್ಟದ ಪ್ರಮಾಣವನ್ನು ಅಂದಾಜಿಸಿ, ಹಾನಿಗೊಳಗಾದ ರೈತರಿಗೆ ಸೂಕ್ತ ಪರಿಹಾರ ಒದಗಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಅಲಂಕಾರಗೊಂಡ ಸರ್ಕಾರಿ ಬಸ್ ಪ್ರಯಾಣಿಕರಲ್ಲಿ ನವೋಲ್ಲಾಸ



“ಮುಂಜಾನೆಯ ಮೆರಗು”

ಜಗಳೂರು, ಅ.22– ದಸರಾ ಹಬ್ಬದ ಹಿನ್ನೆಲೆಯಲ್ಲಿ ಜಗಳೂರಿನಲ್ಲಿ ಸರ್ಕಾರಿ ಬಸ್‌ವೊಂದನ್ನು ಆಕರ್ಷಕವಾಗಿ ಅಲಂಕರಿಸಲಾಗಿದ್ದು, ಪ್ರಯಾಣಿಕರಲ್ಲಿ ಹಬ್ಬದ ಸಂಭ್ರಮ ಮತ್ತು ನವೋಲ್ಲಾಸ ಮೂಡಿಸಿದೆ.

ಹಬ್ಬದ ವಾತಾವರಣಕ್ಕೆ ಮೆರುಗು ನೀಡುವ ಉದ್ದೇಶದಿಂದ ಬಸ್‌ಗೆ ವಿಶೇಷ ಅಲಂಕಾರ ಮಾಡಲಾಗಿದ್ದು, ಪ್ರಯಾಣಿಕರ ಗಮನ ಸೆಳೆಯಿತು. ಸರ್ಕಾರಿ ಸಾರಿಗೆ ಬಸ್‌ಗಳನ್ನು ಹಬ್ಬದ ಸಂದರ್ಭದಲ್ಲಿ ಅಲಂಕರಿಸುವ ಮೂಲಕ ಪ್ರಯಾಣಿಕರಲ್ಲಿ ಸಂತಸ ಮೂಡಿಸುವ ಪ್ರಯತ್ನ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ.

ಈ ಸಂದರ್ಭದಲ್ಲಿ ಬಸ್ ನಿರ್ವಾಹಕ ಕಿರಣ್‌ಕುಮಾರ್, ಚಾಲಕ ಸುನಿಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕೊರಟಿಕೆರೆಗೆ ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಭೇಟಿ

“ಮುಂಜಾನೆಯ ಮೆರಗು”

ಜಗಳೂರು ಅ, 22– ದಸರಾ ಹಬ್ಬದ ಆಚರಣೆಯ ಹಿನ್ನೆಲೆಯಲ್ಲಿ ಜಗಳೂರು ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಅವರು ತಾಲೂಕಿನ ಕೊರಟಿಕೆರೆ ಗ್ರಾಮಕ್ಕೆ ಭೇಟಿ ನೀಡಿ, ಗ್ರಾಮದ ಆರಾಧ್ಯ ದೈವ ಶ್ರೀರಂಗನಾಥ ಸ್ವಾಮಿ ದೇವರ ದರ್ಶನ ಪಡೆದು ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ದಸರಾ ಹಬ್ಬವು ನಾಡಿನ ಜನರಲ್ಲಿ ಭಕ್ತಿ, ಸಂಭ್ರಮ ಹಾಗೂ ಸೌಹಾರ್ದತೆಯನ್ನು ಮೂಡಿಸುವ ಪವಿತ್ರ ಹಬ್ಬವಾಗಿದೆ. ಈ ಹಿನ್ನೆಲೆಯಲ್ಲಿ ದೇವಾಲಯಕ್ಕೆ ಭೇಟಿ ನೀಡಿದ ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಅವರು ನಾಡಿನ ಸಮಸ್ತ ಜನತೆಗೆ ಸುಖ, ಶಾಂತಿ, ಸಮೃದ್ಧಿ ಹಾಗೂ ನೆಮ್ಮದಿ ದೊರೆಯಲಿ ಎಂದು ದೇವರಲ್ಲಿ ಪ್ರಾರ್ಥಿಸಿದರು. ವಿಶೇಷವಾಗಿ ರೈತರು ಉತ್ತಮ ಬದುಕು ಕಟ್ಟಿಕೊಳ್ಳುವಂತಾಗಲಿ, ಕೃಷಿ ಕ್ಷೇತ್ರದಲ್ಲಿ ಸಮೃದ್ಧಿ ನೆಲೆಸಲಿ ಹಾಗೂ ರಾಜ್ಯವು ಸರ್ವಾಂಗೀಣ ಅಭಿವೃದ್ಧಿ ಸಾಧಿಸಲಿ ಎಂದು ಆಶಿಸಿದರು.



ಪಕ್ಷದ ಸಂಘಟನೆ ಬಲವರ್ಧನೆ ಕುರಿತು ಚರ್ಚೆ

ಧಾರ್ಮಿಕ ಭೇಟಿಯ ಬಳಿಕ ಗ್ರಾಮದ ಕಾರ್ಯಕರ್ತರು, ಮುಖಂಡರು, ಹಿರಿಯರು ಹಾಗೂ ಪ್ರಮುಖರೊಂದಿಗೆ ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಅವರು ಸಮಾಲೋಚನೆ ನಡೆಸಿದರು. ಈ ಸಂದರ್ಭದಲ್ಲಿ ಮುಂಬರುವ ರಾಜಕೀಯ ಬೆಳವಣಿಗೆಗಳು, ಪಕ್ಷದ ಮುಂದಿನ ಕಾರ್ಯತಂತ್ರಗಳು ಹಾಗೂ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ಕುರಿತು ಚರ್ಚಿಸಲಾಯಿತು. ಪಕ್ಷದ



ಸಂಘಟನೆಯನ್ನು ಗ್ರಾಮಮಟ್ಟದಿಂದಲೇ ಸದೃಢಗೊಳಿಸುವುದು, ಕಾರ್ಯಕರ್ತರೊಂದಿಗೆ ನಿರಂತರ ಸಂಪರ್ಕ ಹೊಂದುವುದು ಹಾಗೂ ಸ್ಥಳೀಯ ಮುಖಂಡರು ಮತ್ತು ಕಾರ್ಯಕರ್ತರ ಅಭಿಪ್ರಾಯಗಳಿಗೆ ಆದ್ಯತೆ ನೀಡುವ ಮೂಲಕ ಪಕ್ಷದ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಮುನ್ನಡೆಸುವ ಕುರಿತು ಸಮಾಲೋಚನೆ ನಡೆಸಲಾಯಿತು.

ಗ್ರಾಮೀಣ ಪ್ರದೇಶಗಳಲ್ಲಿ ಪಕ್ಷದ ಸಂಘಟನೆಯನ್ನು ವಿಸ್ತರಿಸುವುದು, ಕಾರ್ಯಕರ್ತರಲ್ಲಿ ಹೊಸ ಉತ್ಸಾಹ ತುಂಬುವುದು ಹಾಗೂ ಮುಂಬರುವ ರಾಜಕೀಯ ಬೆಳವಣಿಗೆಗಳನ್ನು ಗಮನದಲ್ಲಿಟ್ಟುಕೊಂಡು ಸಂಘಟನಾತ್ಮಕವಾಗಿ ಸಜ್ಜಾಗುವ ಕುರಿತು ಸಭೆಯಲ್ಲಿ ಚರ್ಚೆ ನಡೆಯಿತು.

ಕೊರಟಿಕೆರೆ ಗ್ರಾಮಕ್ಕೆ ಮಾಜಿ ಶಾಸಕರ ಭೇಟಿ ನೀಡಿದ ಸಂದರ್ಭದಲ್ಲಿ ಸ್ಥಳೀಯ ಕಾರ್ಯಕರ್ತರು, ಮುಖಂಡರು ಹಾಗೂ ಹಿರಿಯರು ಉಪಸ್ಥಿತರಿದ್ದು, ಧಾರ್ಮಿಕ ಮತ್ತು ರಾಜಕೀಯ ವಿಚಾರಗಳ ಕುರಿತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

Editor, Publisher & Owner of the News Paper: RAVIKUMARA J.O, MUNJANEYA MERAGU, JCR BADAVANE, Jagalur- 577-528, Davanagere (D)Karnataka, Printed by: MALLIKARJUNAPPA H G. Printed at: SHIVA MEDIA HOUSE, No.900/A2, Opp-Banashankari Temple Arch, Main Roan, Davanagere, Karnataka-577004.

ಮಾನ್ಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ. ಎಫ್.ಸಿ ನ್ಯಾಯಾಲಯ, ಜಗಳೂರು

ಸಿ.ಆರ್.ಮಿಸ್ ನಂ. 1055/2026

ಅರ್ಜಿದಾರರು: 1) ಟಿ.ಸಿದ್ದೇಶ ಬಿನ್ ತಿಮ್ಮಪ್ಪ, ವಯಸ್ಸು 36 ವರ್ಷ, ಕೆಲಸ ಜಿರಾಯಿತಿ. 2) ತಿಮ್ಮಪ್ಪ ಬಿನ್ ಪಾತಬೋವಿ. ವಯಸ್ಸು 65 ವರ್ಷ, ಕೆಲಸ ಜಿರಾಯಿತಿ. 3) ಜಯಲಕ್ಷ್ಮಿ ಕೋಂ ತಿಮ್ಮಪ್ಪ, ವಯಸ್ಸು 63 ವರ್ಷ, ವಾಸ: ಮುಸ್ಟೂರು ಗ್ರಾಮ, ಜಗಳೂರು ತಾಲೂಕು, ದಾವಣಗೆರೆ ಜಿಲ್ಲೆ. ಹಾಲಿ ವಾಸ: ಭುವನ ನಗರ, ಬಸವನಕೆರೆ 1ನೇ ತಿರುವು, ಬೆಂಗಳೂರು. 4) ಸುಶೀಲಮ್ಮ ಕೋಂ ಲೇಟ್ ಚೌಡಪ್ಪ, ವಯಸ್ಸು 60 ವರ್ಷ, ಕೆಲಸ ಜಿರಾಯಿತಿ. 5) ತಿಮ್ಮೆಶಿ ತಂ ಲೇಟ್ ಚೌಡಪ್ಪ, ವಯಸ್ಸು 35 ವರ್ಷ, ಕೆಲಸ ಜಿರಾಯಿತಿ. 6) ನಾಗರಾಜ ತಂ ಲೇಟ್ ಚೌಡಪ್ಪ, ವಯಸ್ಸು 34 ವರ್ಷ, ಕೆಲಸ ಜಿರಾಯಿತಿ.

1, 2, 4, 5, 6ನೇ ಅರ್ಜಿದಾರರು, ವಾಸ: ಮುಸ್ಟೂರು ಗ್ರಾಮ, ಜಗಳೂರು ತಾಲೂಕು, ದಾವಣಗೆರೆ ಜಿಲ್ಲೆ.

ವಿರುದ್ಧ

ಎದುರುದಾರರು: ತಹಶೀಲ್ದಾರರು, ತಾಲೂಕು ಕಛೇರಿ, ಜಗಳೂರು. ದಾವಣಗೆರೆ ಜಿಲ್ಲೆ.

ಸಾರ್ವಜನಿಕ ನೋಟೀಸ್

ಮೇಲ್ಕಂಡ ಪ್ರಕರಣವನ್ನು ಅರ್ಜಿದಾರರ ಅಜ್ಜಿಯಾದ ಸುಲೋಚನಮ್ಮ ಕೋಂ ಪಾತ ಬೋವಿ ಇವರು ದಿನಾಂಕ: 10.04.1994 ರಿಂದ ಜಗಳೂರು ತಾಲೂಕು, ಮುಸ್ಟೂರು ಗ್ರಾಮದ ಅರ್ಜಿದಾರರ ಮನೆಯಲ್ಲಿ ಸ್ವಾಭಾವಿಕವಾಗಿ ತೀರಿ ಹೋಗಿದ್ದರಿಂದ ಸದರಿ ಅಂಶವನ್ನು ಎತ್ತಿ ತೋರಿಸುವುದಾಗಿ ನ್ಯಾಯಾಲಯಕ್ಕೆ ಕೋರಿ, ಅರ್ಜಿ ಸಲ್ಲಿಸಿರುತ್ತಾರೆ.

ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಯಿಸಿಕೊಂಡು ಪ್ರಕ್ರಣವನ್ನು ದಿನಾಂಕ: 23–11–2026ರ ಬೆಳಿಗ್ಗೆ 11.00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು, ಅರ್ಜಿದಾರರ ಅರ್ಜಿ ವಿಚಾರಣಾ ಕಾರ್ಯಕಾಲಕ್ಕೆ ಇದರಲ್ಲಿ ತಾವಾಗಲಿ, ತಮ್ಮ ಪರ ವಕೀಲರ ಮೂಲಕ ಹಾಜರಾಗಿ, ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ಹಾಜರಾಗುವಂತೆ ಸೂಚಿಸಲಾಗಿದೆ. ತಪ್ಪಿದಲ್ಲಿ ಪ್ರಕ್ರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲು ಅವಕಾಶವಿರುತ್ತದೆ.

ಪ್ರಕಟಣೆಯ ಆದೇಶದ ಮೇರೆಗೆ ದಿನಾಂಕ: 19–10–2026ರಂದು ನೀಡಲಾಗಿದೆ.

ಅರ್ಜಿದಾರರ ಪರ ವಕೀಲರು
ಆರ್.ಓಬಳೇಶ, ವಕೀಲರು.

ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೇದಾರರು
ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ
ನ್ಯಾಯಾಲಯ, ಜಗಳೂರು

ಮಾನ್ಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ. ಎಫ್.ಸಿ ನ್ಯಾಯಾಲಯ, ಜಗಳೂರು

ಸಿ.ಆರ್.ಮಿಸ್ ನಂ. 1054/2026

ಅರ್ಜಿದಾರರು: 1) ಟಿ.ಸಿದ್ದೇಶ ಬಿನ್ ತಿಮ್ಮಪ್ಪ, ವಯಸ್ಸು 36 ವರ್ಷ, ಕೆಲಸ ಜಿರಾಯಿತಿ. 2) ತಿಮ್ಮಪ್ಪ ಬಿನ್ ಪಾತಬೋವಿ. ವಯಸ್ಸು 65 ವರ್ಷ, ಕೆಲಸ ಜಿರಾಯಿತಿ. 3) ಜಯಲಕ್ಷ್ಮಿ ಕೋಂ ತಿಮ್ಮಪ್ಪ, ವಯಸ್ಸು 63 ವರ್ಷ, ವಾಸ: ಮುಸ್ಟೂರು ಗ್ರಾಮ, ಜಗಳೂರು ತಾಲೂಕು, ದಾವಣಗೆರೆ ಜಿಲ್ಲೆ. ಹಾಲಿ ವಾಸ: ಭುವನ ನಗರ, ಬಸವನಕೆರೆ 1ನೇ ತಿರುವು, ಬೆಂಗಳೂರು. 4) ಸುಶೀಲಮ್ಮ ಕೋಂ ಲೇಟ್ ಚೌಡಪ್ಪ, ವಯಸ್ಸು 60 ವರ್ಷ, ಕೆಲಸ ಜಿರಾಯಿತಿ. 5) ತಿಮ್ಮೆಶಿ ತಂ ಲೇಟ್ ಚೌಡಪ್ಪ, ವಯಸ್ಸು 35 ವರ್ಷ, ಕೆಲಸ ಜಿರಾಯಿತಿ. 6) ನಾಗರಾಜ ತಂ ಲೇಟ್ ಚೌಡಪ್ಪ, ವಯಸ್ಸು 34 ವರ್ಷ, ಕೆಲಸ ಜಿರಾಯಿತಿ.

1, 2, 4, 5, 6ನೇ ಅರ್ಜಿದಾರರು, ವಾಸ: ಮುಸ್ಟೂರು ಗ್ರಾಮ, ಜಗಳೂರು ತಾಲೂಕು, ದಾವಣಗೆರೆ ಜಿಲ್ಲೆ.

ವಿರುದ್ಧ

ಎದುರುದಾರರು: ತಹಶೀಲ್ದಾರರು, ತಾಲೂಕು ಕಛೇರಿ, ಜಗಳೂರು. ದಾವಣಗೆರೆ ಜಿಲ್ಲೆ.

ಸಾರ್ವಜನಿಕ ನೋಟೀಸ್

ಮೇಲ್ಕಂಡ ಪ್ರಕರಣವನ್ನು ಅರ್ಜಿದಾರರ ಅಜ್ಜಿಯಾದ ಸುಲೋಚನಮ್ಮ ಕೋಂ ಪಾತ ಬೋವಿ ಇವರು ದಿನಾಂಕ: 07–09–2005 ರಿಂದ ಜಗಳೂರು ತಾಲೂಕು, ಮುಸ್ಟೂರು ಗ್ರಾಮದ ಅರ್ಜಿದಾರರ ಮನೆಯಲ್ಲಿ ಸ್ವಾಭಾವಿಕವಾಗಿ ತೀರಿ ಹೋಗಿದ್ದರಿಂದ ಸದರಿ ಅಂಶವನ್ನು ಎತ್ತಿ ತೋರಿಸುವುದಾಗಿ ನ್ಯಾಯಾಲಯಕ್ಕೆ ಕೋರಿ, ಅರ್ಜಿ ಸಲ್ಲಿಸಿರುತ್ತಾರೆ.

ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಯಿಸಿಕೊಂಡು ಪ್ರಕ್ರಣವನ್ನು ದಿನಾಂಕ: 24–11–2026ರ ಬೆಳಿಗ್ಗೆ 11.00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು, ಅರ್ಜಿದಾರರ ಅರ್ಜಿ ವಿಚಾರಣಾ ಕಾರ್ಯಕಾಲಕ್ಕೆ ಇದರಲ್ಲಿ ತಾವಾಗಲಿ, ತಮ್ಮ ಪರ ವಕೀಲರ ಮೂಲಕ ಹಾಜರಾಗಿ, ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ಹಾಜರಾಗುವಂತೆ ಸೂಚಿಸಲಾಗಿದೆ. ತಪ್ಪಿದಲ್ಲಿ ಪ್ರಕ್ರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲು ಅವಕಾಶವಿರುತ್ತದೆ.

ಪ್ರಕಟಣೆಯ ಆದೇಶದ ಮೇರೆಗೆ ದಿನಾಂಕ: 19–10–2026ರಂದು ನೀಡಲಾಗಿದೆ.

ಅರ್ಜಿದಾರರ ಪರ ವಕೀಲರು
ಆರ್.ಓಬಳೇಶ, ವಕೀಲರು.

ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೇದಾರರು
ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ
ನ್ಯಾಯಾಲಯ, ಜಗಳೂರು

ಮಾನ್ಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ. ಎಫ್.ಸಿ ನ್ಯಾಯಾಲಯ, ಜಗಳೂರು

ಸಿ.ಆರ್.ಮಿಸ್ ನಂ. 1053/2026

ಅರ್ಜಿದಾರರು: 1) ಎನ್.ಮಂಜುನಾಥ ಬಿನ್ ನಾಗಪ್ಪ, ವಯಸ್ಸು 30 ವರ್ಷ, ವಾಸ: ಬಿದರಕೆರೆ ಗ್ರಾಮ, ಜಗಳೂರು ತಾಲೂಕು, ದಾವಣಗೆರೆ ಜಿಲ್ಲೆ. 2) ಕರಿಯಮ್ಮ ಕೋಂ ಕರಿಯಪ್ಪ, ವಯಸ್ಸು 51 ವರ್ಷ, ವಾಸ: ಚಿಕ್ಕಕಬ್ಬಿಗೆರೆ ಗ್ರಾಮ, ಚಿತ್ರದುರ್ಗ ತಾಲೂಕು, ಚಿತ್ರದುರ್ಗ ಜಿಲ್ಲೆ. 3) ಗಂಗಮ್ಮ ಕೋಂ ಆನಂದಪ್ಪ, ವಯಸ್ಸು 32 ವರ್ಷ, ವಾಸ: ಬಿದರಕೆರೆ ಗ್ರಾಮ, ಜಗಳೂರು ತಾಲೂಕು, ದಾವಣಗೆರೆ ಜಿಲ್ಲೆ. 4) ನಾಗಪ್ಪ ಬಿನ್ ನುಂಕಪ್ಪ, ವಯಸ್ಸು 58 ವರ್ಷ, ವಾಸ: ಬಿದರಕೆರೆ ಗ್ರಾಮ, ಜಗಳೂರು ತಾಲೂಕು, ದಾವಣಗೆರೆ ಜಿಲ್ಲೆ.

ವಿರುದ್ಧ

ಎದುರುದಾರರು: ತಹಶೀಲ್ದಾರರು, ತಾಲೂಕು ಕಛೇರಿ, ಜಗಳೂರು. ದಾವಣಗೆರೆ ಜಿಲ್ಲೆ.

ಸಾರ್ವಜನಿಕ ನೋಟೀಸ್

ಮೇಲ್ಕಂಡ ಪ್ರರಕಣವನ್ನು 1 ಮತ್ತು 3&4ರ ಅರ್ಜಿದಾರರ ಅಜ್ಜಿ ಮತ್ತು 2ನೇ ಅರ್ಜಿದಾರರ ತಾಯಿಯಾದ ಚೌಡಮ್ಮ ಕೋಂ ದೊಡ್ಡನಿಂಗಪ್ಪ ಇವರು ದಿನಾಂಕ: 13–02–2021 ರಂದು ಜಗಳೂರು ತಾಲೂಕು, ಬಿದರಕೆರೆ ಗ್ರಾಮದ ಅರ್ಜಿದಾರರ ಮನೆಯಲ್ಲಿ ಸ್ವಾಭಾವಿಕವಾಗಿ ತೀರಿಕೊಂಡಿದ್ದರಿಂದ ಸದರಿ ಅಂಶವನ್ನು ಎದುರುದಾರರು ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುವಂತೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ.

ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ಘನ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ: 24–11–2026 ರಂದು ಬೆಳಿಗ್ಗೆ 11–00 ಗಂಟೆಗೆ ವಿಚಾರಣೆಗಾಗಿ ನಿಗಧಿಪಡಿಸಿದ್ದು, ಅರ್ಜಿದಾರರ ಅರ್ಜಿಗೆ ಯಾರದಾದರೂ ತಕರಾರು ಇದ್ದಲ್ಲಿ ತಾವಾಗಲೀ ಅಥವಾ ತಮ್ಮ ಪರ ವಕೀಲರ ಮುಖಾಂತರವಾಗಲೀ ನಿಗಧಿತ ದಿನಾಂಕದ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ.

ಅರ್ಜಿದಾರರ ಪರ ವಕೀಲರು
ಆರ್.ಓಬಳೇಶ, ವಕೀಲರು.

ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೇದಾರರು
ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ
ನ್ಯಾಯಾಲಯ, ಜಗಳೂರು

ಮಾನ್ಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ. ಎಫ್.ಸಿ ನ್ಯಾಯಾಲಯ, ಜಗಳೂರು

ಸಿ.ಆರ್.ಮಿಸ್ ನಂ. 1059/2026

ಅರ್ಜಿದಾರರು: 1) ಟಿ.ಸಿದ್ದೇಶ ಬಿನ್ ತಿಮ್ಮಪ್ಪ, ವಯಸ್ಸು 36 ವರ್ಷ, ಕೆಲಸ ಜಿರಾಯಿತಿ. 2) ತಿಮ್ಮಪ್ಪ ಬಿನ್ ಪಾತಬೋವಿ. ವಯಸ್ಸು 65 ವರ್ಷ, ಕೆಲಸ ಜಿರಾಯಿತಿ. 3) ಜಯಲಕ್ಷ್ಮಿ ಕೋಂ ತಿಮ್ಮಪ್ಪ, ವಯಸ್ಸು 63 ವರ್ಷ, ವಾಸ: ಮುಸ್ಟೂರು ಗ್ರಾಮ, ಜಗಳೂರು ತಾಲೂಕು, ದಾವಣಗೆರೆ ಜಿಲ್ಲೆ. ಹಾಲಿ ವಾಸ: ಭುವನ ನಗರ, ಬಸವನಕೆರೆ 1ನೇ ತಿರುವು, ಬೆಂಗಳೂರು. 4) ಸುಶೀಲಮ್ಮ ಕೋಂ ಲೇಟ್ ಚೌಡಪ್ಪ, ವಯಸ್ಸು 60 ವರ್ಷ, ಕೆಲಸ ಜಿರಾಯಿತಿ. 5) ತಿಮ್ಮೆಶಿ ತಂ ಲೇಟ್ ಚೌಡಪ್ಪ, ವಯಸ್ಸು 35 ವರ್ಷ, ಕೆಲಸ ಜಿರಾಯಿತಿ. 6) ನಾಗರಾಜ ತಂ ಲೇಟ್ ಚೌಡಪ್ಪ, ವಯಸ್ಸು 34 ವರ್ಷ, ಕೆಲಸ ಜಿರಾಯಿತಿ.

1, 2, 4, 5, 6ನೇ ಅರ್ಜಿದಾರರು, ವಾಸ: ಮುಸ್ಟೂರು ಗ್ರಾಮ, ಜಗಳೂರು ತಾಲೂಕು, ದಾವಣಗೆರೆ ಜಿಲ್ಲೆ.

ವಿರುದ್ಧ

ಎದುರುದಾರರು: ತಹಶೀಲ್ದಾರರು, ತಾಲೂಕು ಕಛೇರಿ, ಜಗಳೂರು. ದಾವಣಗೆರೆ ಜಿಲ್ಲೆ.

ಸಾರ್ವಜನಿಕ ನೋಟೀಸ್

ಮೇಲ್ಕಂಡ ಪ್ರಕರಣವನ್ನು ಅರ್ಜಿದಾರರ ಅರ್ಜಿಯ ತಾಯಿಯಾದ ವೆಂಕಟಜ್ಜಿ ಕೋಂ ವೆಂಕಟಪ್ಪ ಇವರು ದಿನಾಂಕ:06–01–1999ರಂದು ಜಗಳೂರು ತಾಲೂಕು, ಮುಸ್ಟೂರು ಗ್ರಾಮದ ಅರ್ಜಿದಾರರ ಮನೆಯಲ್ಲಿ ಸ್ವಾಭಾವಿಕವಾಗಿ ತೀರಿ ಕೊಂಡಿದ್ದರಿಂದ ಸದರಿ ಅಂಶವನ್ನು ಎದುರುದಾರರು ನೊಂದಾಯಿಸಿ ಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುವಂತೆ ಕೋರಿ, ಅರ್ಜಿ ಸಲ್ಲಿಸಿರುತ್ತಾರೆ.

ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ:–23–11–2026ರ ಬೆಳಿಗೆ 11.00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು ಅರ್ಜಿದಾರರ ಅರ್ಜಿಗೆ ಯಾರಾದರೂ ತಕಾರು ಇದ್ದಲ್ಲಿ ತಾವಾಗಲೀ, ತಮ್ಮ ಪರ ವಕೀಲರ ಮುಖಾಂತರವಾಗಲೀ, ನಿಗದಿತ ದಿನಾಂಕ ಸಮಯದಲ್ಲಿ ಮೇಲ್ಕಂಡ ನ್ಯಾಯಾಲಯದಲ್ಲಿ ಹಾಜರಾಗಿ ಆಕ್ಷೇಪಣಾ ಸಲ್ಲಿಸಬಹುದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು.

ನ್ಯಾಯಾಲಯದ ಆದೇಶದ ಮೇರೆಗೆ ದಿನಾಂಕ:–19–10–2026ರಂದು ನೀಡಲಾಗಿದೆ.

ಅರ್ಜಿದಾರರ ಪರ ವಕೀಲರು
ಆರ್.ಓಬಳೇಶ, ವಕೀಲರು.

ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೇದಾರರು
ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ
ನ್ಯಾಯಾಲಯ, ಜಗಳೂರು

ಮಾನ್ಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ. ಎಫ್.ಸಿ ನ್ಯಾಯಾಲಯ, ಜಗಳೂರು

ಸಿ.ಆರ್.ಮಿಸ್ ನಂ. 1048/2026

ಅರ್ಜಿದಾರರು: 1) ಟಿ.ಸಿದ್ದೇಶ ಬಿನ್ ತಿಮ್ಮಪ್ಪ, ವಯಸ್ಸು 36 ವರ್ಷ, ಕೆಲಸ ಜಿರಾಯಿತಿ. 2) ತಿಮ್ಮಪ್ಪ ಬಿನ್ ಪಾತಬೋವಿ. ವಯಸ್ಸು 65 ವರ್ಷ, ಕೆಲಸ ಜಿರಾಯಿತಿ. 3) ಜಯಲಕ್ಷ್ಮಿ ಕೋಂ ತಿಮ್ಮಪ್ಪ, ವಯಸ್ಸು 63 ವರ್ಷ, ವಾಸ: ಮುಸ್ಟೂರು ಗ್ರಾಮ, ಜಗಳೂರು ತಾಲೂಕು, ದಾವಣಗೆರೆ ಜಿಲ್ಲೆ. ಹಾಲಿ ವಾಸ: ಭುವನ ನಗರ, ಬಸವನಕೆರೆ 1ನೇ ತಿರುವು, ಬೆಂಗಳೂರು. 4) ಸುಶೀಲಮ್ಮ ಕೋಂ ಲೇಟ್ ಚೌಡಪ್ಪ, ವಯಸ್ಸು 60 ವರ್ಷ, ಕೆಲಸ ಜಿರಾಯಿತಿ. 5) ತಿಮ್ಮೆಶಿ ತಂ ಲೇಟ್ ಚೌಡಪ್ಪ, ವಯಸ್ಸು 35 ವರ್ಷ, ಕೆಲಸ ಜಿರಾಯಿತಿ. 6) ನಾಗರಾಜ ತಂ ಲೇಟ್ ಚೌಡಪ್ಪ, ವಯಸ್ಸು 34 ವರ್ಷ, ಕೆಲಸ ಜಿರಾಯಿತಿ.

1, 2, 4, 5, 6ನೇ ಅರ್ಜಿದಾರರು, ವಾಸ: ಮುಸ್ಟೂರು ಗ್ರಾಮ, ಜಗಳೂರು ತಾಲೂಕು, ದಾವಣಗೆರೆ ಜಿಲ್ಲೆ.

ವಿರುದ್ಧ

ಎದುರುದಾರರು: ತಹಶೀಲ್ದಾರರು, ತಾಲೂಕು ಕಛೇರಿ, ಜಗಳೂರು. ದಾವಣಗೆರೆ ಜಿಲ್ಲೆ.

ಸಾರ್ವಜನಿಕ ನೋಟೀಸ್

ಮೇಲ್ಕಂಡ ಪ್ರಕರಣವನ್ನು ಅರ್ಜಿದಾರರ ಅರ್ಜಿಯ ಅಕ್ಕನಾದ ಮುಸ್ಟೂರಮ್ಮ ತಂದೆ ವೆಂಕಟಪ್ಪ ಇವರು ದಿನಾಂಕ:10–10–1985ರಂದು ಜಗಳೂರು ತಾಲ್ಲೂಕು, ಮುಸ್ಟೂರು ಗ್ರಾಮದ ಅರ್ಜಿದಾರರ ಮನೆಯಲ್ಲಿ ಸ್ವಾಭಾವಿಕವಾಗಿ ತೀರಿ ಕೊಂಡಿದ್ದರಿಂದ ಸದರಿ ಅಂಶವನ್ನು ಎದುರುದಾರರು ನೊಂದಾಯಿಸಿ ಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುಂತೆ ಕೋರಿ, ಅರ್ಜಿ ಸಲ್ಲಿಸಿರುತ್ತಾರೆ.

ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಯಿಸಿಕೊಂಡು ಪ್ರಕ್ರಣವನ್ನು ದಿನಾಂಕ: 24–11–2026ರ ಬೆಳಿಗ್ಗೆ 11.00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು, ಅರ್ಜಿದಾರರ ಅರ್ಜಿ ವಿಚಾರಣಾ ಕಾರ್ಯಕಾಲಕ್ಕೆ ಇದರಲ್ಲಿ ತಾವಾಗಲಿ, ತಮ್ಮ ಪರ ವಕೀಲರ ಮೂಲಕ ಹಾಜರಾಗಿ, ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ಹಾಜರಾಗುವಂತೆ ಸೂಚಿಸಲಾಗಿದೆ. ತಪ್ಪಿದಲ್ಲಿ ಪ್ರಕ್ರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲು ಅವಕಾಶವಿರುತ್ತದೆ.

ಪ್ರಕಟಣೆಯ ಆದೇಶದ ಮೇರೆಗೆ ದಿನಾಂಕ: 19–10–2026ರಂದು ನೀಡಲಾಗಿದೆ.

ಅರ್ಜಿದಾರರ ಪರ ವಕೀಲರು
ಆರ್.ಓಬಳೇಶ, ವಕೀಲರು.

ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೇದಾರರು
ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ
ನ್ಯಾಯಾಲಯ, ಜಗಳೂರು

ಲಕ್ಕಶೆಟ್ಟಿಹಳ್ಳಿ ಕಳಮ್ಮ ದೇವಿ ದಸರಾ ಮಹೋತ್ಸವದಲ್ಲಿ ಶಾಸಕ ಬಿ.ಪಿ. ಹರೀಶ್ ಭಾಗಿ



"ಮುಂಜಾನೆಯ ಮೆರಗು"

ಹರಿಹರ ಅ, 22– ತಾಲೂಕಿನ ಲಕ್ಕಶೆಟ್ಟಿಹಳ್ಳಿ ಗ್ರಾಮದಲ್ಲಿ ದಸರಾ ಮಹೋತ್ಸವದ ಕೊನೆಯ ದಿನದ ಅಂಗವಾಗಿ ಗ್ರಾಮ ದೇವತೆ ಶ್ರೀ ಕಳಮ್ಮ ದೇವಿ ದೇವಸ್ಥಾನದಲ್ಲಿ ಆಯೋಜಿಸಿದ್ದ ವಿಶೇಷ ಪೂಜೆ ಹಾಗೂ ಕೆಂಡದ ಕಾರ್ಯಕ್ರಮದಲ್ಲಿ ಶಾಸಕ ಬಿ.ಪಿ. ಹರೀಶ್ ಭಾಗವಹಿಸಿ ದೇವಿಯ ದರ್ಶನ ಪಡೆದು ಆಶೀರ್ವಾದ ಪಡೆದರು.

ದಸರಾ ಮಹೋತ್ಸವದ ಅಂಗವಾಗಿ ದೇವಸ್ಥಾನದಲ್ಲಿ ಧಾರ್ಮಿಕ ವಿಧಿವಿಧಾನಗಳೊಂದಿಗೆ ವಿಶೇಷ ಪೂಜೆ ನೆರವೇರಿಸಲಾಯಿತು. ಬಳಿಕ ನಡೆದ ಕೆ–ಂಡದ ಕಾರ್ಯಕ್ರಮದಲ್ಲಿ ಭಾಗವಹಿಸಿದ ಶಾಸಕರು, ಗ್ರಾಮದೇವತೆಯ ಆಶೀರ್ವಾದ ಪಡೆದು ನಾಡಿನ ಸುಭಿಕ್ಷೆ, ರೈತರ ಏಳಿಗೆ ಹಾಗೂ ಗ್ರಾಮಸ್ಥರ ಸುಖ–ಶಾಂತಿಗಾಗಿ ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಲಕ್ಕಶೆಟ್ಟಿಹಳ್ಳಿ ಗ್ರಾಮಸ್ಥರು ಶಾಸಕ ಬಿ.ಪಿ. ಹರೀಶ್ ಅವರನ್ನು ಸನ್ಮಾನಿಸಿ ಗೌರವಿಸಿದರು. ಗ್ರಾಮದ ಧಾರ್ಮಿಕ ಪರಂಪರೆ ಹಾಗೂ ದಸರಾ ಮಹೋತ್ಸವದ ಆಚರಣೆಗಳು ಭಕ್ತಿಭಾವದಿಂದ ನೆರವೇರಿದವು.

ಗ್ರಾಮದೇವತೆಯ ಉತ್ಸವದಲ್ಲಿ ಗ್ರಾಮಸ್ಥರು ಒಗ್ಗಟ್ಟಿನಿಂದ ಪಾಲ್ಗೊಂಡಿದ್ದು, ಧಾರ್ಮಿಕ ಆಚರಣೆಗಳು ಗ್ರಾಮದಲ್ಲಿ ಭಕ್ತಿ ಮತ್ತು ಸೌಹಾರ್ದತೆಯ ವಾತಾವರಣವನ್ನು ಮೂಡಿಸಿದವು.

ಈ ಸಂದರ್ಭದಲ್ಲಿ ದೇವಸ್ಥಾನ ಸಮಿತಿ ಅಧ್ಯಕ್ಷ ಬಸವರಾಜಪ್ಪ, ಮಾಜಿ ಕಾಳಪ್ಪ, ಶಾಮನೂರು ಸುರೇಶ್, ಬತ್ತಿಕೊಪ್ಪ ಮಂಜುನಾಥ್, ಗೌಡ್ರು ಸುನೀಲ್, ಮಹಾಲಿಂಗಸ್ವಾಮಿ, ಲೋಕಿಕೆರೆ ಅಣ್ಣಪ್ಪ, ಕೆಪ್ಪರ್ ಯೋಗೀಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸಹಕಾರ ಕ್ಷೇತ್ರದಲ್ಲಿ ಬಿಜೆಪಿ ಬೆಂಬಲಿತ ಅಭ್ಯರ್ಥಿಗಳಿಗೆ ಗೆಲುವು



"ಮುಂಜಾನೆಯ ಮೆರಗು"

ಹೊನ್ನಾಳಿ ಅ, 22– ಸೊರಟೂರು ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಚುನಾವಣೆಯಲ್ಲಿ ಬಿಜೆಪಿ ಬೆಂಬಲಿತ ಅಭ್ಯರ್ಥಿಗಳು 12 ಸ್ಥಾನಗಳ ಪೈಕಿ 8 ಸ್ಥಾನಗಳಲ್ಲಿ ಗೆಲುವು ಸಾಧಿಸಿದ್ದಾರೆ ಎಂದು ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ತಿಳಿಸಿದರು.

ಸೊರಟೂರು, ತುಗ್ಗಲಹಳ್ಳಿ, ಹೆಚ್. ಕಡದಕಟ್ಟೆ ಸೇರಿದಂತೆ ವ್ಯಾಪ್ತಿಯ ಗ್ರಾಮಗಳನ್ನು ಒಳಗೊಂಡ ಸಹಕಾರಿ ಸಂಘದ ಚುನಾವಣೆಯಲ್ಲಿ ಗೆಲುವು ಸಾಧಿಸಿದ ಅಭ್ಯರ್ಥಿಗಳನ್ನು ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಅವರು ಹೊನ್ನಾಳಿಯ ತಮ್ಮ ನಿವಾಸದಲ್ಲಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಹಕಾರ ಕ್ಷೇತ್ರವು ರೈತರ ಆರ್ಥಿಕ ಅಭಿವೃದ್ಧಿ ಹಾಗೂ ಕೃಷಿ ಚಟುವಟಿಕೆಗಳಿಗೆ ನೆರವಾಗುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಚುನಾವಣೆಯಲ್ಲಿ ಗೆಲುವು ಸಾಧಿಸಿರುವ ಅಭ್ಯರ್ಥಿಗಳು ರೈತರ ಹಿತಾಸಕ್ತ

ಸಹ್ಯಾದ್ರಿ ನಗರದಲ್ಲಿ 5 ಕೋಟಿ ವೆಚ್ಚದ ರಸ್ತೆ, ಚರಂಡಿ ಕಾಮಗಾರಿಗೆ ಲಕ್ಷ್ಮಿ ಹೆಬ್ಬಾಳ್ಕರ್ ಚಾಲನೆ



"ಮುಂಜಾನೆಯ ಮೆರಗು"


ಬೆಳಗಾವಿ ಅ, 22– ಬೆಳಗಾವಿ ಗ್ರಾಮೀಣ ಕ್ಷೇತ್ರದ ಸಹ್ಯಾದ್ರಿ ನಗರದಲ್ಲಿ ಸುಮಾರು 5 ಕೋಟಿ ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಿರುವ ರಸ್ತೆ, ಚರಂಡಿ ಹಾಗೂ ಯುಟಿಲಿಟಿ ಪೈಪ್ ಅಳವಡಿಕೆ ಕಾಮಗಾರಿಗೆ ಮಾಜಿ ಸಚಿವೆ ಹಾಗೂ ಶಾಸಕಿ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಭೂಮಿಪೂಜೆ ನೆರವೇರಿಸಿ ಚಾಲನೆ ನೀಡಿದರು.

ಕ್ಷೇತ್ರದಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡುವ ನಿಟ್ಟಿನಲ್ಲಿ ಈ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದ್ದು, ಸುಸಜ್ಜಿತ ರಸ್ತೆ, ಸಮರ್ಪಕ ಚರಂಡಿ ವ್ಯವಸ್ಥೆ ಹಾಗೂ ಅಗತ್ಯ ಯುಟಿಲಿಟಿ ಪೈಪ್‌ಗಳ ಅಳವಡಿಕೆಯಿಂದ ಸ್ಥಳೀಯ ನಿವಾಸಿಗಳಿಗೆ ಅನುಕೂಲವಾಗಲಿದೆ. ಸಾರ್ವಜನಿಕರ ದೈನಂದಿನ ಸಂಚಾರವನ್ನು ಸುಗಮಗೊಳಿಸುವುದರ ಜತೆಗೆ, ಪ್ರದೇಶದ ಮೂಲಸೌಕರ್ಯವನ್ನು ಅಭಿವೃದ್ಧಿಪಡಿಸುವುದು ಕಾಮಗಾರಿಯ ಉದ್ದೇಶವಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕಿ ಲಕ್ಷ್ಮಿ ಹೆಬ್ಬಾಳ್ಕರ್, ಗ್ರಾಮೀಣ ಕ್ಷೇತ್ರದಲ್ಲಿ ಉತ್ತಮ ರಸ್ತೆ ಮತ್ತು ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವ ಮೂಲಕ ಸಾರ್ವಜನಿಕರ ಪ್ರಯಾಣವನ್ನು ಸುಗಮಗೊಳಿಸುವುದು ಹಾಗೂ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ವೇಗ ನೀಡುವುದು ತಮ್ಮ ಮುಖ್ಯ ಗುರಿಯಾಗಿದೆ ಎಂದು ತಿಳಿಸಿದರು.

ಭೂಮಿಪೂಜೆ ಕಾರ್ಯಕ್ರಮದಲ್ಲಿ ಸಹ್ಯಾದ್ರಿ ನಗರದ ಸ್ಥಳೀಯ ನಿವಾಸಿಗಳು, ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಮಧ್ಯರಾತ್ರಿ 3 ಗಂಟೆಯಾದರೂ ಪಟಾಕಿ ಸದ್ದು: ಫನ್ ವರ್ಲ್ಡ್ ವಿರುದ್ಧ ನಟಿ ರಮ್ಯಾ ಆಕ್ರೋಶ



"ಮುಂಜಾನೆಯ ಮೆರಗು"

ಬೆಂಗಳೂರು ಅ, 22– ನಗರದ ಫನ್ ವರ್ಲ್ಡ್ ಮನರಂಜನಾ ಕೇಂದ್ರದಲ್ಲಿ ಮಧ್ಯರಾತ್ರಿ 3 ಗಂಟೆ–ಯಾದರೂ ಪಟಾಕಿ ಸಿಡಿಸಿ, ಜೋರಾಗಿ ಸಂಗೀತ ಹಾಕಲಾಗುತ್ತಿದೆ ಎಂದು ಆರೋಪಿಸಿರುವ ನಟಿ ಹಾಗೂ ಮಾಜಿ ಸಂಸದೆ ರಮ್ಯಾ (ದಿವ್ಯ ಸ್ಪಂದನಾ), ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಫನ್ ವರ್ಲ್ಡ್‌ನಲ್ಲಿ ತಡರಾತ್ರಿಯವರೆಗೂ ಪಟಾಕಿ ಸಿಡಿಸಲಾಗುತ್ತಿರುವುದನ್ನು ಉಲ್ಲೇಖಿಸಿ ಸಾಮಾಜಿಕ ಜಾಲತಾಣ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿರುವ ಅವರು, ರಾತ್ರಿ 10ರಿಂದ ಬೆಳಿಗ್ಗೆ 6ರವರೆಗೆ ಪಟಾಕಿ ಸಿಡಿಸುವುದಕ್ಕೆ ನಿರ್ಬಂಧವಿದೆ ಎಂದು ತಿಳಿಸಿದ್ದಾರೆ. ವಿಶೇಷ ಅನುಮತಿ ಇದ್ದರೂ ಮಧ್ಯರಾತ್ರಿಯ ನಂತರ ಧ್ವನಿವರ್ಧಕ ಬಳಕೆಗೆ ಅವಕಾಶವಿಲ್ಲ ಎಂಬುದನ್ನು ಪ್ರಸ್ತಾಪಿಸಿದ್ದಾರೆ.

ವಿಶೇಷ ಸಂದರ್ಭಗಳಲ್ಲಿ ಕೆಲವೊಂದು ವಿನಾಯಿತಿಗಳು ಅಗತ್ಯವಾಗಬಹುದು. ಆದರೆ, ನಸುಕಿನ ಜಾವದವರೆಗೂ ಪಟಾಕಿ ಸಿಡಿಸಿ ಜೋರಾಗಿ ಸಂಗೀತ ಹಾಕುವುದರಿಂದ ಸುತ್ತಮುತ್ತಲಿನ ನಿವಾಸಿಗಳಿಗೆ ತೊಂದರೆಯಾಗುತ್ತದೆ ಎಂದು ರಮ್ಯಾ ಆತಂಕ ವ್ಯಕ್ತಪಡಿಸಿದ್ದಾರೆ. ಈ ಪ್ರದೇಶದ ಸುತ್ತಮುತ್ತ ಆಸ್ಪತ್ರೆಗಳಿದ್ದು, ಹಿರಿಯ ನಾಗರಿಕರು ಮತ್ತು ಮಕ್ಕಳು ವಾಸಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಶಬ್ದಮಾಲಿನ್ಯದಿಂದ ಸಾರ್ವಜನಿಕರಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಈ ಸಂಬಂಧ ಬೆಂಗಳೂರು ನಗರ ಪೊಲೀಸರು ಹಾಗೂ ಉತ್ತರ ವಿಭಾಗದ ಡಿಸಿಪಿ ಅವರ ಗಮನ ಸೆಳೆದಿರುವ ರಮ್ಯಾ, ನಿಯಮ ಉಲ್ಲಂಘನೆಯಾಗಿದ್ದರೆ ಸೂಕ್ತ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದಾರೆ.

ಸಾರ್ವಜನಿಕರ ನೆಮ್ಮದಿ ಮತ್ತು ಆರೋಗ್ಯದ ದೃಷ್ಟಿಯಿಂದ ಶಬ್ದಮಾಲಿನ್ಯ ನಿಯಂತ್ರಣ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವ ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳು ದೂರು ಪರಿಶೀಲಿಸಿ ಕ್ರಮ ಕೈಗೊಳ್ಳಬೇಕೆಂಬ ಒತ್ತಾಯ ವ್ಯಕ್ತವಾಗಿದೆ.



"ಮುಂಜಾನೆಯ ಮೆರಗು"

ದಾವಣಗೆರೆ ಅ.22– ಕರ್ನಾಟಕ ಆಗ್ನೇಯ ಪದವೀಧರರ ಕ್ಷೇತ್ರದಿಂದ ಕರ್ನಾಟಕ ವಿಧಾನ ಪರಿಷತ್ತಿಗೆ ದ್ವೈವಾರ್ಷಿಕ ಚುನಾವಣೆಗೆ ಅಕ್ಟೋಬರ್ 23ರಂದು 43 ಮತಗಟ್ಟೆಗಳಲ್ಲಿ ಬೆಳಿಗ್ಗೆ 8 ರಿಂದ ಸಂಜೆ 4 ರವರೆಗೆ ಮತದಾನ ನಡೆಯಲಿದೆ. ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಇಂದು ನಡೆದ ಮಸ್ಟರಿಂಗ್ ಕಾರ್ಯದ ಸಿದ್ಧತೆಗಳನ್ನು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ ಅವರು ಪರಿಶೀಲಿಸಿದರು, ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್ ಹಾಗೂ ಚುನಾವಣಾ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಡೀಪ್‌ಟೆಕ್ ಮತ್ತು ಎಐ ನಾವೀನ್ಯತೆಗೆ ARTPARK ಬಲವರ್ಧನೆ: ಪ್ರಿಯಾಂಕ್ ಖರ್ಗೆ

"ಮುಂಜಾನೆಯ ಮೆರಗು"

ಬೆಂಗಳೂರು ಅ, 22– ಕೃತಕ ಬುದ್ಧಿಮತ್ತೆ (ಎಐ), ರೊಬೊಟಿಕ್ಸ್ ಸೇರಿದಂತೆ ಸುಧಾರಿತ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಕರ್ನಾಟಕದ ಸಾಮರ್ಥ್ಯವನ್ನು ಮತ್ತಷ್ಟು ಹೆಚ್ಚಿಸುವ ಉದ್ದೇಶದಿಂದ ಐಟಿ–ಬಿಟಿ ಇಲಾಖೆಯ ಬೆಂಬಲಿತ ಶ್ರೇಷ್ಠತಾ ಕೇಂದ್ರವಾದ ARTPARK (ಎಐ ಮತ್ತು ರೊಬೊಟಿಕ್ಸ್ ತಂತ್ರಜ್ಞಾನ ಪಾರ್ಕ್)ನ ಮುಂದಿನ ಹಂತದ ಬೆಳವಣಿಗೆ ಹಾಗೂ ವಿಸ್ತರಣೆಯ ಕುರಿತು ಸಚಿವ ಪ್ರಿಯಾಂಕ್ ಖರ್ಗೆ ಅವರು ತಂಡದೊಂದಿಗೆ ಚರ್ಚೆ ನಡೆಸಿದರು.

ಕೇಂದ್ರ ಸರ್ಕಾರದ ಸಂಶೋಧನೆ, ಅಭಿವೃದ್ಧಿ ಮತ್ತು ನಾವೀನ್ಯತೆ (RDI) ನಿಧಿಯಡಿ 500 ಕೋಟಿ ಅನುದಾನ ಹಂಚಿಕೆಯೊಂದಿಗೆ ಆಯ್ಕೆಯಾಗಿರುವ ಐದು ಕೇಂದ್ರೀಕೃತ ಸಂಶೋಧನಾ ಸಂಸ್ಥೆಗಳಲ್ಲಿ ARTPARK ಕೂಡ ಒಂದಾಗಿದೆ ಎಂದು ತಂಡ ಸಚಿವರಿಗೆ ಮಾಹಿತಿ ನೀಡಿತು. ಈ ಐದು ಸಂಸ್ಥೆಗಳ ಪೈಕಿ ಎರಡು ಬೆಂಗಳೂರಿನಲ್ಲಿದ್ದು, ರಾಜ್ಯದ ಐಟಿ–ಬಿಟಿ ಇಲಾಖೆಯ ಬೆಂಬಲ ಪಡೆದಿರುವ ARTPARK ಮತ್ತು C-CAMP ಸ್ಥಾನ ಪಡೆದಿರುವುದು ಕರ್ನಾಟಕಕ್ಕೆ ಹೆಮ್ಮೆಯ ಸಂಗತಿಯಾಗಿದೆ ಎಂದು ತಿಳಿಸಲಾಯಿತು.



ಕರ್ನಾಟಕ ಸರ್ಕಾರವು ಆರಂಭದಿಂದಲೂ ARTPARKಗೆ 62 ಕೋಟಿಗೂ ಅಧಿಕ ಅನುದಾನ ನೀಡಿದೆ. ಈವರೆಗೆ 36 ಡೀಪ್‌ಟೆಕ್ ಕಂಪನಿಗಳಿಗೆ ಬೆಂಬಲ ಒದಗಿಸಿದ್ದು, ಇನ್ನೂ 18 ಕಂಪನಿಗಳು ಬೆಳವಣಿಗೆಯ ಹಾದಿಯಲ್ಲಿವೆ. ARTPARKನ ಬೆಂಬಲ ಪಡೆದ ನವೋದ್ಯಮಗಳ ಒಟ್ಟು ಮೌಲ್ಯ 1,700 ಕೋಟಿಗೂ ಅಧಿಕವಾಗಿದೆ. ಇದರೊಂದಿಗೆ ಹಲವು ಮಹತ್ವದ ಸಾಮಾಜಿಕ ನಾವೀನ್ಯತಾ ಯೋಜನೆಗಳನ್ನು ಅನುಷ್ಠಾನಗೊಳಿಸಿರುವ ಸಂಸ್ಥೆಯು, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ NM-ICPS ಕಾರ್ಯಕ್ರಮದಡಿ ದೇಶದ 23 ಕೇಂದ್ರಗಳಲ್ಲಿ ಅಗ್ರ ಎರಡು ಸ್ಥಾನಗಳಲ್ಲೊಂದಾಗಿ ಗುರುತಿಸಿಕೊಂಡಿದೆ.

ARTPARKನ ಮುಂದಿನ ಹಂತದ ಬೆಳವಣಿಗೆಯಲ್ಲಿ ಬೆಂಗಳೂರು ರೊಬೊಟಿಕ್ಸ್ ಮತ್ತು ಕೃತಕ ಬುದ್ಧಿಮತ್ತೆ ನಾವೀನ್ಯತಾ ವಲಯವಾದ ಬ್ರೈನ್ಸ್ (BRAINZ) ಮೂಲಕ ಹೆಚ್ಚಿನ ಮೌಲ್ಯ ಸೃಷ್ಟಿಸುವ ಗುರಿ ಹೊಂದಲಾಗಿದೆ. ಇದರ ಜತೆಗೆ ಆರ್ಟ್‌ಗ್ಯಾರೇಜ್ ಮತ್ತು ಆರ್ಟ್‌ಲ್ಯಾಬ್ಸ್‌ಗಳನ್ನು ಸುಧಾರಿತ ಮಾದರಿ ನಿರ್ಮಾಣ, ಉತ್ಪಾದನೆ ಹಾಗೂ ಹಂಚಿಕೆಯ ಸಂಶೋಧನೆ ಮತ್ತು ಅಭಿವೃದ್ಧಿ ಸೌಲಭ್ಯಗಳೊಂದಿಗೆ ಮತ್ತಷ್ಟು ಬಲಪಡಿಸಲು ಉದ್ದೇಶಿಸಲಾಗಿದೆ.

ಪ್ರಾಥಮಿಕ ಡೀಪ್‌ಟೆಕ್ ಕ್ಷೇತ್ರಗಳಿಗೆ ಆದ್ಯತೆ ನೀಡಿ ಮಹತ್ವಾಕಾಂಕ್ಷೆಯ ಯೋಜನೆಗಳನ್ನು ಕೈಗೆತ್ತಿಕೊಳ್ಳುವ ಮೂಲಕ ಸಂಶೋಧನೆ, ತಂತ್ರಜ್ಞಾನ ಅಭಿವೃದ್ಧಿ ಮತ್ತು ನವೋದ್ಯಮಗಳ ಬೆಳವಣಿಗೆಗೆ ಉತ್ತೇಜನ ನೀಡಲಾಗುವುದು. ಈ ಪ್ರಯತ್ನಗಳು ಕರ್ನಾಟಕವನ್ನು ಕೃತಕ ಬುದ್ಧಿಮತ್ತೆ, ರೊಬೊಟಿಕ್ಸ್ ಮತ್ತು ಸುಧಾರಿತ ತಂತ್ರಜ್ಞಾನಗಳ ಪ್ರಮುಖ ಕೇಂದ್ರವನ್ನಾಗಿ ರೂಪಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಲಿವೆ.

ಚೀನಾ ರಾಯಭಾರಿ ಕ್ಸ್ಯೂ ಫಿಯಾಂಗ್ ನೇತೃತ್ವದ ನಿಯೋಗದಿಂದ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ಭೇಟಿ

"ಮುಂಜಾನೆಯ ಮೆರಗು"

ಬೆಂಗಳೂರು ಅ, 22– ಭಾರತದಲ್ಲಿನ ಚೀನಾ ರಾಯಭಾರಿ ಕ್ಸ್ಯೂ ಫಿಯಾಂಗ್ (Xu Feihong) ಅವರ ನೇತೃತ್ವದ ನಿಯೋಗವು ವಿಧಾನಸೌಧದಲ್ಲಿ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ಅವರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಿತು.

ಸಭೆಯಲ್ಲಿ ಕರ್ನಾಟಕ ಮತ್ತು ಚೀನಾ ನಡುವಿನ ಸಂಬಂಧಗಳು ಹಾಗೂ ವಾಣಿಜ್ಯ, ಕೈಗಾರಿಕೆ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಕ್ಷೇತ್ರಗಳಿಗೆ ಸಂಬಂಧಿಸಿದ ವಿಚಾರಗಳ ಕುರಿತು ಚರ್ಚೆ ನಡೆಸಲಾಯಿತು.

ಈ ವೇಳೆ ರಾಜ್ಯದ ಆರ್ಥಿಕ ಅಭಿವೃದ್ಧಿ, ಕೈಗಾರಿಕಾ ವಲಯದಲ್ಲಿನ ಅವಕಾಶಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಪರಸ್ಪರ ಸಹಕಾರವನ್ನು ವಿಸ್ತರಿಸುವ ಸಾಧ್ಯತೆಗಳ ಕುರಿತು ಚರ್ಚೆ ನಡೆದಿರುವುದಾಗಿ ತಿಳಿದುಬಂದಿದೆ.

ಈ ಸಂದರ್ಭದಲ್ಲಿ ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರ ಎಲ್.ಕೆ. ಅತೀಕ್, ಕಂದಾಯ ಮತ್ತು ಗೃಹ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿ ರಾಜೇಂದರ್ ಕುಮಾರ್ ಕಟಾರಿಯಾ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ (ಐಟಿ–ಬಿಟಿ) ಇಲಾಖೆಯ ಕಾರ್ಯದರ್ಶಿ ಮಂಜುಳಾ ಹಾಗೂ ಮುಖ್ಯಮಂತ್ರಿಯವರ ಕಾರ್ಯದರ್ಶಿ ನಕುಲ್ ಉಪಸ್ಥಿತರಿದ್ದರು.




ಕರ್ನಾಟಕ ಬಲ್ಗೇರಿಯಾ ಸಹಕಾರ ಬಲವರ್ಧನೆಗೆ ಚರ್ಚೆ: ಬೆಂಗಳೂರು ಟೆಕ್ ಸಮ್ಮಿಟ್‌ಗೆ ಬಲ್ಗೇರಿಯಾಗೆ ಆಹ್ವಾನ

"ಮುಂಜಾನೆಯ ಮೆರಗು"

ಬೆಂಗಳೂರು ಅ, 22– ಕರ್ನಾಟಕ ಮತ್ತು ಬಲ್ಗೇರಿಯಾ ನಡುವಿನ ದ್ವಿಪಕ್ಷೀಯ ಸಹಕಾರವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಅವರು ಭಾರತದಲ್ಲಿನ ಬಲ್ಗೇರಿಯಾ ರಾಯಭಾರಿ ಡಾ. ನಿಕೊಲೇ ಯಾಂಕೊವ್ ಅವರನ್ನು ಭೇಟಿಯಾಗಿ ಮಹತ್ವದ ಚರ್ಚೆ ನಡೆಸಿದರು.

ಸಂದರ್ಭದಲ್ಲಿ ಕರ್ನಾಟಕದ ತಂತ್ರಜ್ಞಾನ, ನಾವೀನ್ಯತೆ ಹಾಗೂ ಹೂಡಿಕೆ ವಲಯಗಳಲ್ಲಿರುವ ಅವಕಾಶಗಳನ್ನು ರಾಯಭಾರಿಗಳಿಗೆ ಪರಿಚಯಿಸಲಾಯಿತು. ರಾಜ್ಯದಲ್ಲಿ ತಂತ್ರಜ್ಞಾನ ಆಧಾರಿತ ಉದ್ಯಮಗಳ ಬೆಳವಣಿಗೆ, ನವೋದ್ಯಮಗಳಿಗೆ ಉತ್ತೇಜನ ಮತ್ತು ಹೂಡಿಕೆ ಆಕರ್ಷಣೆಯ ಸಾಧ್ಯತೆಗಳ ಕುರಿತು ಚರ್ಚಿಸಲಾಯಿತು. ಅಲ್ಲದೆ, ಕರ್ನಾಟಕ ಮತ್ತು ಬಲ್ಗೇರಿಯಾ ನಡುವೆ ರಾಜ್ಯಮಟ್ಟದಲ್ಲಿ ಪರಸ್ಪರ ಸಹಕಾರ ವೃದ್ಧಿಸಬಹುದಾದ ನಿರ್ದಿಷ್ಟ ಕ್ಷೇತ್ರಗಳನ್ನು ಗುರುತಿಸುವ ಬಗ್ಗೆಯೂ ಸಮಾಲೋಚನೆ ನಡೆಸಲಾಯಿತು.



ಬಲ್ಗೇರಿಯಾದ ವಿದೇಶಾಂಗ ಸಚಿವರ ಭಾರತ ಭೇಟಿಯ ಹಿನ್ನೆಲೆಯಲ್ಲಿ, ಬೆಂಗಳೂರಿನಲ್ಲಿ ನಡೆಯಲಿರುವ ಬೆಂಗಳೂರು ಟೆಕ್ ಸಮ್ಮಿಟ್–2026ರಲ್ಲಿ ಭಾಗವಹಿಸುವಂತೆ ಬಲ್ಗೇರಿಯಾ ದೇಶಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಆಹ್ವಾನ ನೀಡಿದರು. ಜಾಗತಿಕ ತಂತ್ರಜ್ಞಾನ ಕ್ಷೇತ್ರದಲ್ಲಿ ಕರ್ನಾಟಕದ ಸಾಮರ್ಥ್ಯವನ್ನು ಪರಿಚಯಿಸುವುದರ ಜೊತೆಗೆ, ಅಂತರರಾಷ್ಟ್ರೀಯ ಸಹಭಾಗಿತ್ವ ವಿಸ್ತರಿಸಲು ಈ ಸಮಾವೇಶ ಮಹತ್ವದ ವೇದಿಕೆಯಾಗಲಿದೆ ಎಂಬ ಆಶಯ ವ್ಯಕ್ತವಾಯಿತು.

ಇದೇ ವೇಳೆ, ಕರ್ನಾಟಕದ ಗ್ಲೋಬಲ್ ಇನ್ನೋವೇಶನ್ ಅಲೈಯನ್ಸ್ ಮೂಲಕ ಬಲ್ಗೇರಿಯಾ ರಾಜ್ಯದೊಂದಿಗೆ ಇನ್ನಷ್ಟು ಸದೃಢ ಸಹಭಾಗಿತ್ವ ಬೆಳೆಸಿಕೊಳ್ಳುವಂತೆಯೂ ಆಹ್ವಾನಿಸಲಾಯಿತು. ತಂತ್ರಜ್ಞಾನ, ನಾವೀನ್ಯತೆ ಮತ್ತು ಹೂಡಿಕೆ ಕ್ಷೇತ್ರಗಳಲ್ಲಿ ಎರಡೂ ಕಡೆಯ ಸಂಸ್ಥೆಗಳು ಪರಸ್ಪರ ಸಹಕರಿಸುವ ಮೂಲಕ ಹೊಸ ಅವಕಾಶಗಳನ್ನು ಸೃಷ್ಟಿಸಬಹುದು ಎಂಬ ಆಶಯ ಈ ಚರ್ಚೆಯಲ್ಲಿ ವ್ಯಕ್ತವಾಯಿತು.

ಶರಾವತಿ ಪಂಪ್ಡ್ ಸ್ಟೋರೇಜ್, ಮೇಕೆದಾಟು ಯೋಜನೆಗೆ ತ್ವರಿತ ಅನುಮೋದನೆ ನೀಡಿ: ಕೇಂದ್ರ ಸಚಿವರಿಗೆ ಸಿಎಂ ಮನವಿ

"ಮುಂಜಾನೆಯ ಮೆರಗು"

ನವದೆಹಲಿ ಅ, 22– ಕರ್ನಾಟಕದ ಅಭಿವೃದ್ಧಿ ಆದ್ಯತೆಗಳು, ಪರಿಸರ ಸಂಬಂಧಿತ ಕಳವಳಗಳು ಹಾಗೂ ಇಂಧನ ಮತ್ತು ಜಲ ಭದ್ರತೆಗೆ ಸಂಬಂಧಿಸಿದ ಪ್ರಮುಖ ಯೋಜನೆಗಳ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ಅವರನ್ನು ನವದೆಹಲಿಯಲ್ಲಿ ಭೇಟಿ ಮಾಡಿ ಮನವಿ ಸಲ್ಲಿಸಿದರು.

ರಾಜ್ಯದ ಅಭಿವೃದ್ಧಿಗೆ ಮಹತ್ವದ ನಾಲ್ಕು ಪ್ರಮುಖ ವಿಷಯಗಳನ್ನು ಕೇಂದ್ರ ಸಚಿವರ ಗಮನಕ್ಕೆ ತಂದ ಮುಖ್ಯಮಂತ್ರಿ, ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆಗೆ ಶೀಘ್ರ ಪರಿಗಣನೆ, ಮೇಕೆದಾಟು ಯೋಜನೆಯ ಭೂತಾಂತ್ರಿಕ ಸಮೀಕ್ಷೆಗೆ ಅವಕಾಶ, ಪಶ್ಚಿಮ ಘಟ್ಟ ಪರಿಸರ ಸೂಕ್ಷ್ಮ ವಲಯದ ಕರಡು ಅಧಿಸೂಚನೆ ಅಂತಿಮಗೊಳಿಸುವಿಕೆಯನ್ನು ಮುಂದೂಡುವುದು ಹಾಗೂ ಸಕ್ಕರೆ ಕಾರ್ಖಾನೆಯೊಂದನ್ನು ಪರಿಸರ ಸೂಕ್ಷ್ಮ ವಲಯದಿಂದ ಹೊರಗಿಡುವಂತೆ ಮನವಿ ಮಾಡಿದರು.

ಶರಾವತಿ ಯೋಜನೆಗೆ ತ್ವರಿತ ಪರಿಗಣನೆಗೆ ಮನವಿ

2,000 ಮೆಗಾವ್ಯಾಟ್ ಸಾಮರ್ಥ್ಯದ ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆಗೆ ಶೀಘ್ರ ಪರಿಗಣನೆ ನೀಡಿ ಶಿಫಾರಸು ಮಾಡುವಂತೆ ಮುಖ್ಯಮಂತ್ರಿ ಮನವಿ ಮಾಡಿದರು. ಈ ಯೋಜನೆಗೆ ಸಂಬಂಧಿಸಿದಂತೆ ಸ್ಥಾಯಿ ಸಮಿತಿ ಕೇಳಿದ್ದ ಅಗತ್ಯ ಸ್ಪಷ್ಟೀಕರಣಗಳು ಹಾಗೂ ರಾಷ್ಟ್ರೀಯ ಸುಧಾರಿತ ಅಧ್ಯಯನ ಸಂಸ್ಥೆ (ಎನ್‌ಐಎಎಸ್) ವರದಿಯನ್ನು ರಾಜ್ಯ ಸರ್ಕಾರ ಈಗಾಗಲೇ ಸಲ್ಲಿಸಿದೆ ಎಂದು ಅವರು ತಿಳಿಸಿದರು. ಯೋಜನೆಯ ಮುಂದಿನ ಪ್ರಕ್ರಿಯೆಗಳನ್ನು ತ್ವರಿತಗೊಳಿಸುವ ಅಗತ್ಯವನ್ನು ಒತ್ತಿಹೇಳಿದರು.

ಮೇಕೆದಾಟು ಯೋಜನೆಯ ಸಮೀಕ್ಷೆಗೆ ಅವಕಾಶ ಕೋರಿಕೆ

ಮೇಕೆದಾಟು ಸಮತೋಲನ ಜಲಾಶಯ ಮತ್ತು ಕುಡಿಯುವ ನೀರಿನ ಯೋಜನೆಗೆ ಸಂಬಂಧಿಸಿದಂತೆ 20 ಬೋರ್‌ಹೋಲ್‌ಗಳನ್ನು ಒಳಗೊಂಡ ಭೂತಾಂತ್ರಿಕ ಸಮೀಕ್ಷೆಯ ಪ್ರಸ್ತಾವನೆಯನ್ನು ಶೀಘ್ರ ಪರಿಗಣಿಸುವಂತೆ ಮುಖ್ಯಮಂತ್ರಿ ಕೋರಿದರು. ಪ್ರಸ್ತುತ ಈ ಸಮೀಕ್ಷೆಯ ಪ್ರಸ್ತಾವನೆಯಲ್ಲಿ ಸಂರಕ್ಷಿತ ಪ್ರದೇಶದ ಭೂಮಿಯನ್ನು ಬೇರೆ ಉದ್ದೇಶಕ್ಕೆ ಬಳಸುವ ಅಥವಾ ಅರಣ್ಯ ಪ್ರದೇಶವನ್ನು ತಿರುಗಿಸುವ ಪ್ರಸ್ತಾಪವಿಲ್ಲ ಎಂಬ ಅಂಶವನ್ನು ಕೇಂದ್ರ ಸಚಿವರ ಗಮನಕ್ಕೆ ತಂದರು.

ಪಶ್ಚಿಮ ಘಟ್ಟ ಕರಡು ಅಧಿಸೂಚನೆ ಮುಂದೂಡಲು ಆಗ್ರಹ

ಪಶ್ಚಿಮ ಘಟ್ಟಗಳ ಪರಿಸರ ಸೂಕ್ಷ್ಮ ವಲಯಕ್ಕೆ ಸಂಬಂಧಿಸಿದ ಏಳನೇ ಕರಡು ಅಧಿಸೂಚನೆಯನ್ನು ಅಂತಿಮಗೊಳಿಸುವ ಪ್ರಕ್ರಿಯೆಯನ್ನು ಮುಂದೂಡುವಂತೆ ಮುಖ್ಯಮಂತ್ರಿ ಮನವಿ ಮಾಡಿದರು. ರಾಜ್ಯ ಸರ್ಕಾರ ರಚಿಸಿರುವ ಉನ್ನತ ಮಟ್ಟದ ಸಮಿತಿಯು ತನ್ನ ವರದಿ ಸಲ್ಲಿಸುವವರೆಗೆ ಹಾಗೂ ಒಂದು ವರ್ಷದೊಳಗೆ ಸ್ಥಳ ಪರಿಶೀಲನೆ ಪೂರ್ಣಗೊಳ್ಳುವವರೆಗೆ ಅಂತಿಮ ನಿರ್ಧಾರ ಕೈಗೊಳ್ಳಬಾರದು ಎಂದು ಕೋರಿದರು.


ರಾಜ್ಯದ ಭೌಗೋಳ

ಮರೇನಹಳ್ಳಿಯಲ್ಲಿ ಚರಂಡಿ ಅವ್ಯವಸ್ಥೆ: ರಸ್ತೆಯಲ್ಲೇ ಕೊಳಚೆ ನೀರು ಸಂಚಾರಕ್ಕೆ ತೀವ್ರ ತೊಂದರೆ ವರ್ಷಗಳಿಂದ ಚರಂಡಿ ಸ್ವಚ್ಛಗೊಳಿಸದ ಆರೋಪ; ದುರ್ವಾಸನೆಯಿಂದ ಗ್ರಾಮಸ್ಥರ ಪರದಾಟ

“ಮುಂಜಾನೆಯ ಮೆರಗು”

ಜಗಳೂರು ಅ, 22– ತಾಲೂಕಿನ ದೊಣ್ಣೆಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮರೇನಹಳ್ಳಿ ಗ್ರಾಮದಲ್ಲಿ ಚರಂಡಿಗಳನ್ನು ಸ್ವಚ್ಛಗೊಳಿಸದ ಪರಿಣಾಮ ಕೊಳಚೆ ನೀರು ರಸ್ತೆಯ ಮೇಲೆ ಹರಿಯುತ್ತಿದ್ದು, ವಾಹನ ಸವಾರರು ಹಾಗೂ ಪಾದಚಾರಿಗಳು ತೀವ್ರ ತೊಂದರೆ ಅನುಭವಿಸುವಂತಾಗಿದೆ. ಗ್ರಾಮ ಪಂಚಾಯಿತಿ ಅಧಿಕಾರಿಗಳ ನಿರ್ಲಕ್ಷ್ಯವೇ ಈ ಅವ್ಯವಸ್ಥೆಗೆ ಕಾರಣ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಗ್ರಾಮದ ಚರಂಡಿಗಳಲ್ಲಿ ಹೂಳು ತುಂಬಿಕೊಂಡಿದ್ದು, ನೀರು ಸರಾಗವಾಗಿ ಹರಿಯಲು ಸಾಧ್ಯವಾಗುತ್ತಿಲ್ಲ. ಇದರಿಂದ ಚರಂಡಿ ನೀರು ರಸ್ತೆಯ ಮೇಲೆ ಹರಿದು ನಿಲ್ಲುತ್ತಿದೆ. ಅಲ್ಲದೆ, ಗ್ರಾಮದ ಮುಖ್ಯರಸ್ತೆಯಲ್ಲಿರುವ ಡಕ್‌ಗಳು (ನೀರಿನ ಹರಿವಿಗೆ ಅಳವಡಿಸಿರುವ ಅಡ್ಡಚರಂಡಿ ಮಾರ್ಗಗಳು) ಹೂಳಿನಿಂದ ಮುಚ್ಚಿಹೋಗಿರುವುದರಿಂದ ನೀರು ಸರಾಗವಾಗಿ ಹರಿಯದೆ ರಸ್ತೆಯಲ್ಲೇ ಸಂಗ್ರಹವಾಗುತ್ತಿದೆ. ಇದರಿಂದ



ವಾಹನಗಳ ಸಂಚಾರಕ್ಕೆ ಅಡ್ಡಿಯಾಗುವುದರ ಜತೆಗೆ ರಸ್ತೆಯಲ್ಲಿ ಸಂಚರಿಸುವ ಸಾರ್ವಜನಿಕರು ಸಂಕಷ್ಟ ಎದುರಿಸುತ್ತಿದ್ದಾರೆ.

ರಸ್ತೆಯಲ್ಲೇ ಕೊಳಚೆ ನೀರು ಸಂಗ್ರಹವಾಗಿರುವುದರಿಂದ ದುರ್ವಾಸನೆ ಹರಡುತ್ತಿದ್ದು, ಗ್ರಾಮದಲ್ಲಿ ಆರೋಗ್ಯಕರ ವಾತಾವರಣ ಇಲ್ಲದಂತಾಗಿದೆ. ಮಕ್ಕಳು, ವೃದ್ಧರು ಹಾಗೂ ಪಾದಚಾರಿಗಳು ರಸ್ತೆಯಲ್ಲಿ ಓಡಾಡಲು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಚರಂಡಿಗಳನ್ನು ಸ್ವಚ್ಛಗೊಳಿಸಿ, ನೀರು ಸರಾಗವಾಗಿ ಹರಿಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಗ್ರಾಮದ ಮುಖ್ಯರಸ್ತೆಯಲ್ಲಿರುವ ಡಕ್‌ಗಳಲ್ಲಿ ಹೂಳು ತುಂಬಿಕೊಂಡಿರುವುದರಿಂದ ನೀರು ರಸ್ತೆಯ ಮೇಲೆ ನಿಂತಿದೆ. ಇದರಿಂದ ವಾಹನ ಸವಾರರು ಸಂಚರಿಸಲು ತೊಂದರೆಯಾಗುತ್ತಿದೆ. ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಲು ಗ್ರಾಮ ಪಂಚಾಯಿತಿ ಅಧಿಕಾರಿಗಳು ಮುಂದಾಗಬೇಕು ಎಂದು ಕೆ.ಸಿ. ತಿಪ್ಪೇಸ್ವಾಮಿ ಆಗ್ರಹಿಸಿದ್ದಾರೆ.

ರಸ್ತೆಯ ಮೇಲೆ ಕೊಳಚೆ ನೀರು ನಿಂತಿರುವುದರಿಂದ ದುರ್ವಾಸನೆ ಹರಡುತ್ತಿದೆ. ಮಕ್ಕಳು ಮತ್ತು ವೃದ್ಧರು ರಸ್ತೆಯಲ್ಲಿ ಓಡಾಡಲು ಪರದಾಡುವಂತಾಗಿದೆ. ಅಧಿಕಾರಿಗಳು ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಬೊಮ್ಮಘಟ್ಟ ನಾಗರಾಜ್ ಹಾಗೂ ಚಮನ್ ಸಾಬ್ ಒತ್ತಾಯಿಸಿದ್ದಾರೆ.

ಎರಡು ವರ್ಷಗಳಿಂದ ಸ್ವಚ್ಛತೆಯಿಲ್ಲ!

ಕಳೆದ ಸುಮಾರು ಎರಡು ವರ್ಷಗಳಿಂದ ಗ್ರಾಮದಲ್ಲಿರುವ ಚರಂಡಿಗಳನ್ನು ಸಮರ್ಪಕವಾಗಿ ಸ್ವಚ್ಛಗೊಳಿಸಿಲ್ಲ. ಇದರಿಂದ ಚರಂಡಿಗಳಲ್ಲಿ ಹೂಳು ತುಂಬಿಕೊಂಡು ಕೊಳಚೆ ನೀರು ರಸ್ತೆಯ ಮೇಲೆ ಹರಿಯುತ್ತಿದೆ. ಗ್ರಾಮ ಪಂಚಾಯಿತಿ ಅಧಿಕಾರಿಗಳು ಈ ಸಮಸ್ಯೆಯತ್ತ ಗಮನಹರಿಸದಿರುವುದು ಗ್ರಾಮಸ್ಥರ ಆಕ್ರೋಶಕ್ಕೆ ಕಾರಣವಾಗಿದೆ. ಇನ್ನಾದರೂ ಅಧಿಕಾರಿಗಳು ಎಚ್ಚೆತ್ತುಕೊಂಡು ಗ್ರಾಮದಲ್ಲಿ ಸ್ವಚ್ಛತಾ ಕಾರ್ಯ ಕೈಗೊಳ್ಳಬೇಕು ಎಂದು ಗ್ರಾಮಸ್ಥ ರಾಜ್ ಒತ್ತಾಯಿಸಿದ್ದಾರೆ.

ಸಮಸ್ಯೆ ಬಗೆಹರಿಸಲು ಸೂಚನೆ

ಮರೇನಹಳ್ಳಿ ಗ್ರಾಮದಲ್ಲಿ ಚರಂಡಿ ನೀರು ರಸ್ತೆಯ ಮೇಲೆ ಹರಿಯುತ್ತಿರುವ ಸಮಸ್ಯೆಯನ್ನು ಬಗೆಹರಿಸುವಂತೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಪಿಡಿಒ) ಅವರಿಗೆ ಸೂಚನೆ ನೀಡಲಾಗಿದೆ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆಂಚಪ್ಪ ತಿಳಿಸಿದ್ದಾರೆ.



ಹಾಲುಮತದ ಸಾಂಪ್ರದಾಯಿಕ ಕಾರಿ ಕಂಬಳಿ ಹೊದಿಸಿ ಶ್ರೀರಾಮುಲು ಅವರಿಗೆ ಅಭಿನಂದನೆ

“ಮುಂಜಾನೆಯ ಮೆರಗು”

ಜಗಳೂರು ಅ, 22– ಹಿಂದುಳಿದ ವರ್ಗದ ಯುವಕರಿಗೆ ರಾಜಕೀಯ ಕ್ಷೇತ್ರದಲ್ಲಿ ಮಾರ್ಗದರ್ಶನ ನೀಡುತ್ತಿರುವ ಹಿರಿಯ ನಾಯಕ, ಮಾಜಿ ಸಚಿವ ಹಾಗೂ ವಾಲ್ಮೀಕಿ ಸಮಾಜದ ಪ್ರಮುಖ ಮುಖಂಡ ಬಿ. ಶ್ರೀರಾಮುಲು ಅವರನ್ನು ಶುಕ್ರವಾರ ಬಳ್ಳಾರಿಯಲ್ಲಿ ಭೇಟಿಯಾದ ಅಭಿಮಾನಿಯೊಬ್ಬರು, ಹಾಲುಮತ ಸಮಾಜದ ಸಾಂಪ್ರದಾಯಿಕ ಗುರುತಾದ ಕಾರಿಯಾಕಂಬಳಿ ಹೊದಿಸಿ ಗೌರವಪೂರ್ವಕವಾಗಿ ಅಭಿನಂದಿಸಿದರು.

ಮಾಜಿ ಸಚಿವ ಶ್ರೀರಾಮುಲು ಅವರು ರಾಜ್ಯ ರಾಜಕಾರಣದಲ್ಲಿ ತಮ್ಮದೇ ಆದ ಗುರುತನ್ನು ಮೂಡಿಸಿಕೊಂಡಿದ್ದು, ಹಿಂದುಳಿದ ವರ್ಗಗಳ ಜನರ ಸಮಸ್ಯೆಗಳು ಹಾಗೂ ಅವರ ರಾಜಕೀಯ ಪ್ರಾತಿನಿಧ್ಯದ ವಿಚಾರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಹಿರಿಯ ನಾಯಕರಾಗಿದ್ದಾರೆ. ಇಂತಹ ಹಿರಿಯ ನಾಯಕನನ್ನು ಭೇಟಿಯಾಗಿ ಗೌರವ ಸಲ್ಲಿಸಿರುವುದು ತಮಗೆ ಸಂತಸ ತಂದಿದೆ ಎಂದು ಅಭಿಮಾನಿ ತಿಳಿಸಿದರು.

ಜಗಳೂರು ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಎಸ್.ಐ. ರಾಮಚಂದ್ರ ಅವರ ಆತ್ಮೀಯರಾಗಿರುವ ಶ್ರೀರಾಮುಲು ಅವರು, ಹಿಂದುಳಿದ ವರ್ಗದ ಯುವಕರಿಗೆ ರಾಜಕೀಯ ಕ್ಷೇತ್ರದಲ್ಲಿ ಪ್ರೋತ್ಸಾಹ ಮತ್ತು ಮಾರ್ಗದರ್ಶನ ನೀಡುವ ನಾಯಕರಾಗಿದ್ದಾರೆ. ಅವರ ರಾಜಕೀಯ ಅನುಭವ, ಜನಸಂಪರ್ಕ ಹಾಗೂ ನಾಯಕತ್ವದ ಗುಣಗಳು ಯುವಜನರಿಗೆ ಪ್ರೇರಣೆಯಾಗಿವೆ ಎಂದು ಅಭಿಮಾನಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಹಾಲುಮತ ಸಮಾಜದ ಸಾಂಪ್ರದಾಯಿಕ ಸಂಸ್ಕೃತಿ ಮತ್ತು ಪರಂಪರೆಯನ್ನು ಪ್ರತಿಬಿಂಬಿಸುವ ಕಾರಿಯಾಕಂಬಳಿಗೆ ವಿಶೇಷ ಮಹತ್ವವಿದೆ. ಈ ಹಿನ್ನೆಲೆಯಲ್ಲಿ ಸಮಾಜದ ಸಾಂಪ್ರದಾಯಿಕ ಗುರುತಾದ ಕಾರಿಯಾಕಂಬಳಿಯನ್ನು ಶ್ರೀರಾಮುಲು ಅವರಿಗೆ ಹೊದಿಸಿ ಗೌರವ ಸಲ್ಲಿಸುವ ಮೂಲಕ ತಮ್ಮ ಅಭಿಮಾನ, ಪ್ರೀತಿ ಹಾಗೂ



ಗೌರವವನ್ನು ವ್ಯಕ್ತಪಡಿಸಿದರು.

ಸಮಾಜದ ಹಿರಿಯ ನಾಯಕರನ್ನು ಗೌರವಿಸುವುದು, ಅವರೊಂದಿಗಿನ ಆತ್ಮೀಯ ಸಂಬಂಧವನ್ನು ಉಳಿಸಿಕೊಳ್ಳುವುದು ಮತ್ತು ಯುವಜನರಿಗೆ ರಾಜಕೀಯ ಕ್ಷೇತ್ರದಲ್ಲಿ ಸೂಕ್ತ ಮಾರ್ಗದರ್ಶನ ದೊರೆಯುವಂತೆ ಮಾಡುವುದು ಇಂದಿನ ಅಗತ್ಯವಾಗಿದೆ. ಈ ಉದ್ದೇಶದಿಂದ ಶ್ರೀರಾಮುಲು ಅವರನ್ನು ಭೇಟಿಯಾಗಿ ಅಭಿನಂದಿಸಿರುವುದಾಗಿ ಅವರು ತಿಳಿಸಿದರು.

ಹಾಲುಮತ ಸಮಾಜದ ಸಂಪ್ರದಾಯಕ್ಕೆ ಗೌರವ ನೀಡುವ ಈ ಭೇಟಿಯು ಸಾಮಾಜಿಕ ಬಾಂಧವ್ಯ ಹಾಗೂ ಪರಸ್ಪರ ಗೌರವದ ಸಂಕೇತವಾಗಿ ಗಮನ ಸೆಳೆಯಿತು.

ಸೊಕ್ಕೆ ಜಿಪಂ ಕ್ಷೇತ್ರಕ್ಕೆ ಕಾಂಗ್ರೆಸ್ ಟಿಕೆಟ್‌ಗಾಗಿ ಕಲ್ಪನಾ ಅರ್ಜಿ ಸಲ್ಲಿಕೆ

“ಮುಂಜಾನೆಯ ಮೆರಗು”

ಜಗಳೂರು: ಸೊಕ್ಕೆ ಜಿಲ್ಲಾ ಪಂಚಾಯಿತಿ ಸಾಮಾನ್ಯ ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಲು ಆಕಾಂಕ್ಷೆ ವ್ಯಕ್ತಪಡಿಸಿರುವ ಬ್ಲಾಕ್ ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷೆ ಶ್ರೀಮತಿ ಕಲ್ಪನಾ ಎನ್.ಎಂ. ಹೊಸಕೆರೆ ಅವರು ಗುರುವಾರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಂಷೀರ್ ಅಹಮ್ಮದ್ ಅವರಿಗೆ ಅರ್ಜಿ ಸಲ್ಲಿಸಿದರು. ಕಾಂಗ್ರೆಸ್ ಪಕ್ಷದ ಮಹಿಳಾ ಘಟಕದ ಪದಾಧಿಕಾರಿಗಳು, ಸದಸ್ಯರು, ಹಲವು ಮಹಿಳೆಯರು ಹಾಗೂ ಕಾಂಗ್ರೆಸ್ ಮುಖಂಡರು ಭಾಗವಹಿಸಿದ್ದರು.



ಸೊಕ್ಕೆ ಜಿಲ್ಲಾ ಪಂಚಾಯಿತಿ ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸುವ ಉದ್ದೇಶದಿಂದ ಕಲ್ಪನಾ ಎನ್. ಎಂ. ಅವರು ತಮ್ಮ ಆಕಾಂಕ್ಷೆ ವ್ಯಕ್ತಪಡಿಸಿ, ಪಕ್ಷದ ವರಿಷ್ಠರು ಅವಕಾಶ ಕಲ್ಪಿಸುವಂತೆ ಅರ್ಜಿ ಸಲ್ಲಿಸಿರುವುದು ಗಮನ ಸೆಳೆಯಿತು.

ಜಿಲ್ಲಾಮಟ್ಟದ ಗುಂಡು ಎಸೆತ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ: ರಾಜ್ಯಮಟ್ಟಕ್ಕೆ ನಿಖಿತ ಆಯ್ಕೆ

“ಮುಂಜಾನೆಯ ಮೆರಗು”

ಜಗಳೂರು ಅ, 22– ದಾವಣಗೆರೆ ಜಿಲ್ಲಾಮಟ್ಟದ ಗುಂಡು ಎಸೆತ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಪಡೆದು ರಾಜ್ಯಮಟ್ಟದ ಸ್ಪರ್ಧೆಗೆ ಆಯ್ಕೆಯಾಗುವ ಮೂಲಕ ತಾಲೂಕಿನ ಹಿರೇಮಲ್ಲನಹೊಳೆ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ ನಿಖಿತ ಸಾಧನೆ ಮೆರೆದಿದ್ದಾರೆ.

ಜಿಲ್ಲಾಮಟ್ಟದ ಕ್ರೀಡಾಕೂಟದಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ ನಿಖಿತ, ದ್ವಿತೀಯ ಸ್ಥಾನ ಗಳಿಸುವ ಮೂಲಕ ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಲು ಅರ್ಹತೆ ಪಡೆದಿದ್ದಾರೆ. ವಿದ್ಯಾರ್ಥಿನಿಯ ಈ ಸಾಧನೆಯಿಂದ ಶಾಲೆಗೆ ಹಾಗೂ ಗ್ರಾಮಕ್ಕೆ ಕೀರ್ತಿ ತಂದಿದ್ದಾರೆ.

ವಿದ್ಯಾರ್ಥಿನಿಯ ಸಾಧನೆಗೆ ಸರ್ಕಾರಿ ಪ್ರೌಢಶಾಲೆಯ ಮುಖ್ಯಶಿಕ್ಷಕರು, ಶಿಕ್ಷಕ ವೃಂದ, ಶಾಲಾ ಸಿಬ್ಬಂದಿ ಹಾಗೂ ಗ್ರಾಮಸ್ಥರು ಹರ್ಷ ವ್ಯಕ್ತಪಡಿಸಿ



ಅಭಿನಂದನೆ ಸಲ್ಲಿಸಿದ್ದಾರೆ. ರಾಜ್ಯಮಟ್ಟದ ಸ್ಪರ್ಧೆಯಲ್ಲಿಯೂ ಉತ್ತಮ ಪ್ರದರ್ಶನ ನೀಡಿ ಯಶಸ್ಸು ಗಳಿಸಲಿ ಎಂದು ಶುಭ ಹಾರೈಸಿದ್ದಾರೆ.

ಮತದಾನ ಕೇಂದ್ರಗಳಿಗೆ ಅಧಿಕಾರಿಗಳ ಭೇಟಿ, ಪರಿಶೀಲನೆ

“ಮುಂಜಾನೆಯ ಮೆರಗು”

ಜಗಳೂರು ಅ 22– ಆಗ್ನೇಯ ಪದವೀಧರ ಕ್ಷೇತ್ರದ ಚುನಾವಣೆಯ ಹಿನ್ನೆಲೆಯಲ್ಲಿ ಪಟ್ಟಣದ ಮತದಾನ ಕೇಂದ್ರಗಳಿಗೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆಂಚಪ್ಪ ಹಾಗೂ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿ. ಲೋಕ್ಯಾನಾಯ್ಕ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಶುಕ್ರವಾರ, ಅ.23ರಂದು ನಡೆಯಲಿರುವ ಆಗ್ನೇಯ ಪದವೀಧರ ಕ್ಷೇತ್ರದ ಚುನಾವಣೆಗೆ ಸಂಬಂಧಿಸಿದಂತೆ ಗುರುವಾರ ಮತಗಟ್ಟೆಗಳಿಗೆ ಭೇಟಿ ನೀಡಿದ ಅಧಿಕಾರಿಗಳು, ಮತದಾನ ಪ್ರಕ್ರಿಯೆಗೆ ಅಗತ್ಯವಿರುವ ಸಿದ್ಧತೆಗಳನ್ನು ಪರಿಶೀಲಿಸಿದರು.

ಮತದಾರರಿಗೆ ಅನುಕೂಲವಾಗುವಂತೆ ಮತಗಟ್ಟೆಗಳಲ್ಲಿ ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಲಾಗುವುದು. ಚುನಾವಣೆಯನ್ನು ಸುಗಮವಾಗಿ ನಡೆಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದರು.



ಜಗಳೂರು ಗೊಲ್ಲರಹಟ್ಟಿಯಲ್ಲಿ ಚರಂಡಿ ಅವ್ಯವಸ್ಥೆ

ಕುಡಿಯುವ ನೀರಿನ ಪೈಪ್‌ಲೈನ್‌ಗೆ ಚರಂಡಿ ನೀರು ಸೇರ್ಪಡೆ ಶಂಕೆ: ಸಾಂಕ್ರಾಮಿಕ ರೋಗದ ಭೀತಿಯಲ್ಲಿ ಗ್ರಾಮಸ್ಥರು


“ಮುಂಜಾನೆಯ ಮೆರಗು”

ಜಗಳೂರು: ಅ.22– ತಾಲೂಕಿನ ಹನುಮಂತಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜಗಳೂರು ಗೊಲ್ಲರಹಟ್ಟಿಯ ಭೋವಿ ಕಾಲೋನಿಯಲ್ಲಿ ಚರಂಡಿ ಸ್ವಚ್ಛತೆ ಇಲ್ಲದೆ ಕೊಳಚೆ ನೀರು ರಸ್ತೆಯ ಮೇಲೆ ಹರಿಯುತ್ತಿದ್ದು, ಸ್ಥಳೀಯ ನಿವಾಸಿಗಳು ತೀವ್ರ ತೊಂದರೆ ಅನುಭವಿಸುವಂತಾಗಿದೆ. ಇದರ ಜತೆಗೆ ಕುಡಿಯುವ ನೀರಿನ ಪೈಪ್‌ಲೈನ್‌ಗೆ ಚರಂಡಿ ನೀರು ಸೇರುತ್ತಿದೆ ಎಂಬ ಆತಂಕ ವ್ಯಕ್ತವಾಗಿದ್ದು, ಗ್ರಾಮಸ್ಥರು ಕಲುಷಿತ ನೀರು ಹಾಗೂ ಸಾಂಕ್ರಾಮಿಕ ರೋಗಗಳ ಭೀತಿಯಲ್ಲಿ ದಿನದೂಡುವ ಪರಿಸ್ಥಿತಿ ನಿರ್ಮಾಣವಾಗಿದೆ.

ಕಾಲೋನಿಯ ಚರಂಡಿಗಳು ಹಲವು ದಿನಗಳಿಂದ ಸ್ವಚ್ಛಗೊಳ್ಳದೆ ತುಂಬಿ ತುಳುಕುತ್ತಿವೆ. ಚರಂಡಿಗಳಲ್ಲಿ ಕೊಳಚೆ ನೀರು ಸರಾಗವಾಗಿ ಹರಿಯದೆ ಒಂದೇ ಕಡೆ ಸಂಗ್ರಹವಾಗುತ್ತಿರುವುದರಿಂದ ಸುತ್ತಮುತ್ತಲಿನ ಪ್ರದೇಶದಲ್ಲಿ ದುರ್ವಾಸನೆ ಹರಡುತ್ತಿದೆ. ಮನೆಗಳ ಮುಂದೆ ಹಾಗೂ ರಸ್ತೆಯ ಮೇಲೆ ಕೊಳಚೆ ನೀರು ಹರಿಯುತ್ತಿರುವುದರಿಂದ ಸಾರ್ವಜನಿಕರು ಓಡಾಡಲು ತೊಂದರೆಯಾಗುತ್ತಿದೆ. ಅದರಲ್ಲೂ ಮಕ್ಕಳು, ವೃದ್ಧರು ಹಾಗೂ ಮಹಿಳೆಯರು ಕೊಳಚೆ ನೀರಿನ ನಡುವೆ ಸಂಚರಿಸುವ ಅನಿವಾರ್ಯತೆ ಎದುರಾಗಿದೆ.

ಸೊಳ್ಳೆಗಳ ಕಾಟ, ರೋಗಗಳ ಭೀತಿ

ಚರಂಡಿಗಳಲ್ಲಿ ನೀರು ನಿಂತಿರುವುದರಿಂದ ಸೊಳ್ಳೆಗಳ ಸಂತಾನೋತ್ಪತ್ತಿಗೆ ಅನುಕೂಲಕರ ವಾತಾವರಣ ನಿರ್ಮಾಣವಾಗಿದೆ. ಈಗಾಗಲೇ ಸೊಳ್ಳೆಗಳ ಕಾಟ ಹೆಚ್ಚಾಗಿದ್ದು, ಶೀತ, ಜ್ವರ ಸೇರಿದಂತೆ ವಿವಿಧ ಕಾಯಿಲೆಗಳು ಹರಡಬಹುದೆಂಬ ಆತಂಕ ಗ್ರಾಮಸ್ಥರನ್ನು ಕಾಡುತ್ತಿದೆ. ಮಳೆನೀರು ಹಾಗೂ ಕೊಳಚೆ



ನೀರು ಸರಾಗವಾಗಿ ಹರಿಯಲು ಸೂಕ್ತ ವ್ಯವಸ್ಥೆ ಇಲ್ಲದಿರುವುದರಿಂದ ಸಮಸ್ಯೆ ದಿನದಿಂದ ದಿನಕ್ಕೆ ಉಲ್ಬಣಿಸುತ್ತಿದೆ ಎಂಬುದು ಸ್ಥಳೀಯರ ಅಳಲಾಗಿದೆ.

ಕುಡಿಯುವ ನೀರಿನ ಸುರಕ್ಷತೆಯ ಬಗ್ಗೆಯೂ ಆತಂಕ

ಚರಂಡಿಗಳು ತುಂಬಿ ತುಳುಕುತ್ತಿರುವುದರಿಂದ ಕೊಳಚೆ ನೀರು ಕುಡಿಯುವ ನೀರಿನ ಪೈಪ್‌ಲೈನ್‌ಗೆ ಸೇರುತ್ತಿದೆ ಎಂಬ ಶಂಕೆ ವ್ಯಕ್ತವಾಗಿದೆ. ಕೆಲವು ಮನೆಗಳ ನಳಗಳಲ್ಲಿ ಕಲುಷಿತ ನೀರು ಬರುತ್ತಿದೆ ಎಂದು ಸ್ಥಳೀಯರು ದೂರಿದ್ದು, ಕುಡಿಯುವ ನೀರಿನ ಸುರಕ್ಷತೆಯ ಬಗ್ಗೆ ಗಂಭೀರ ಪ್ರಶ್ನೆಗಳು ಉದ್ಭವಿಸಿವೆ.

ಕುಡಿಯುವ ನೀರು ಪ್ರತಿಯೊಂದು ಕುಟುಂಬದ ಮೂಲಭೂತ ಅಗತ್ಯವಾಗಿದೆ. ಆದರೆ, ನಳಗಳಲ್ಲಿ ಕಲುಷಿತ ನೀರು ಬರುತ್ತಿದೆ ಎಂಬ ಆತಂಕದಿಂದ ನೀರನ್ನು ಬಳಸುವ ಮುನ್ನವೇ ಗ್ರಾಮಸ್ಥರು ಆತಂಕಪಡುವಂತಾಗಿದೆ. ನೀರಿನ ಪೈಪ್‌ಲೈನ್‌ನಲ್ಲಿ ಸೋರಿಕೆ ಉಂಟಾಗಿದೆಯೇ ಅಥವಾ ಚರಂಡಿ ನೀರು ಪೈಪ್‌ಲೈನ್‌ಗೆ ಸೇರುತ್ತಿದೆಯೇ ಎಂಬುದನ್ನು ಸಂಬಂಧಪಟ್ಟ ಅಧಿಕಾರಿಗಳು ತಾಂತ್ರಿಕವಾಗಿ ಪರಿಶೀಲಿಸಿ ಖಚಿತಪಡಿಸಬೇಕಿದೆ.

ಕುಡಿಯುವ ನೀರು ಕಲುಷಿತಗೊಂಡಿದ್ದರೆ ಅದು ಸಾರ್ವಜನಿಕರ ಆರೋಗ್ಯಕ್ಕೆ ಅಪಾಯಕಾರಿಯಾಗುವ ಸಾಧ್ಯತೆ ಇರುವುದರಿಂದ, ನೀರಿನ ಮಾದರಿಯನ್ನು ಪರೀಕ್ಷಿಸಿ ಸುರಕ್ಷಿತ



ಕುಡಿಯುವ ನೀರು ಪೂರೈಸಲು ಕ್ರಮ ಕೈಗೊಳ್ಳಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

ಅಧಿಕಾರಿಗಳಿಗೆ ಮನವಿ ಮಾಡಿದರೂ ಪ್ರಯೋಜನವಿಲ್ಲ!

ಕಾಲೋನಿಯಲ್ಲಿ ಉಂಟಾಗಿರುವ ಚರಂಡಿ ಸಮಸ್ಯೆ ಹಾಗೂ ಕುಡಿಯುವ ನೀರಿನ ಪೈಪ್‌ಲೈನ್‌ಗೆ ಸಂಬಂಧಿಸಿದ ಆತಂಕದ ಕುರಿತು ಗ್ರಾಮ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಲಾಗಿದೆ. ಆದರೂ ಸಮಸ್ಯೆ ಬಗೆಹರಿಸಲು ಅಗತ್ಯ ಕ್ರಮ ಕೈಗೊಂಡಿಲ್ಲ ಎಂಬುದು ಗ್ರಾಮಸ್ಥರ ಆರೋಪವಾಗಿದೆ.

ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯದ ಹಿನ್ನೆಲೆಯಲ್ಲಿ ಗ್ರಾಮಸ್ಥರೇ ಕುಡಿಯುವ ನೀರಿನ ಪೈಪ್‌ಲೈನ್ ದುರಸ್ತಿಗೆ ಮುಂದಾಗಿದ್ದಾರೆ ಎನ್ನಲಾಗಿದೆ. ಆದರೂ ನಳಗಳಲ್ಲಿ ಕಲುಷಿತ ನೀರು ಬರುತ್ತಿದೆ ಎಂಬ ಆತಂಕ ಮುಂದುವರಿದ್ದು, ಸ್ಥಳೀಯರು ಮತ್ತಷ್ಟು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ನಿವಾಸಿ ತಿಮ್ಮೇಶ್ ಅಳಲು ತೋಡಿಕೊಂಡಿದ್ದಾರೆ.

ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ತುಂಬಿ ತುಳುಕುತ್ತಿರುವ ಚರಂಡಿಗಳನ್ನು ಸ್ವಚ್ಛಗೊಳಿಸಿ, ಕೊಳಚೆ ನೀರು ರಸ್ತೆಯ ಮೇಲೆ ಹರಿಯುವಂತೆ ಶಾಶ್ವತ ವ್ಯವಸ್ಥೆ ಕಲ್ಪಿಸಬೇಕು. ಕುಡಿಯುವ ನೀರಿನ ಪೈಪ್‌ಲೈನ್‌ಗಳನ್ನು ಪರಿಶೀಲಿಸಿ, ಸೋರಿಕೆ ಅಥವಾ ಕಲುಷಿತ ನೀರು ಸೇರುವ ಸಾಧ್ಯತೆ ಕಂಡುಬಂದರೆ ತಕ್ಷಣ ದುರಸ್ತಿಗೊಳಿಸಬೇಕು. ಅಗತ್ಯವಿದ್ದಲ್ಲಿ ನೀರಿನ ವಾತಾವರಣವನ್ನು ಪ್ರಯೋಗಾಲಯಕ್ಕೆ ಕಳುಹಿಸಿ ಪರೀಕ್ಷಿಸಬೇಕು. ಅಲ್ಲದೆ,